ಸತ್ಯ ಮತ್ತು ಧೈರ್ಯದ ಧ್ವನಿ

ತುಂಗ ಬಿಂಬ

TUNGA BIMBA | KANNADA DAILY MORNING | ಕನ್ನಡ ದಿನ ಪತ್ರಿಕೆ | RNI No: KARKAN/2023/86923

ಸಂಪುಟ: Vol: 04 | ಸಂಚಿಕೆ: Issue: 134 | ರಾಯಚೂರು Raichur 05-11-2026 | ಗುರುವಾರ Thursday | ಪುಟ : Page: 04 | ಬೆಲೆ: Price: ₹ 2.00 | Postal Reg No.: RCR/L/RNP/95/2025-27 | tungabimba@gmail.com | ಸಂಪಾದಕರು : ಗುರುರಾಜ ಕೆ | Editor: Gururaja K 98863 85685



ಬಸ್ ಪ್ರಯಾಣ ದರ ಏರಿಕೆ ಅನಿವಾರ್ಯ: ಡಿ.ಕೆ. ಶಿವಕುಮಾರ್ ಸಮರ್ಥನೆ

ಬೆಂಗಳೂರು: ರಾಜ್ಯದ ನಾಲ್ಕು ಸಾರಿಗೆ ನಿಗಮಗಳು ಎದುರಿಸುತ್ತಿರುವ ಆರ್ಥಿಕ ಸಂಕಷ್ಟ ಹಾಗೂ ಇಂಧನ ಬೆಲೆ ಏರಿಕೆಯ ಹಿನ್ನೆಲೆಯಲ್ಲಿ ಬಸ್ ಪ್ರಯಾಣ ದರ ಹೆಚ್ಚಿಸುವುದು ಅನಿವಾರ್ಯವಾಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸಮರ್ಥಿಸಿಕೊಂಡಿದ್ದಾರೆ.

ಬುಧವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಾರಿಗೆ ನಿಗಮಗಳು ಭಾರಿ ನಷ್ಟದಲ್ಲಿವೆ. ಹತ್ತು ದಿನಗಳ ಹಿಂದೆಯಷ್ಟೇ ಡೀಸೆಲ್ ಖರೀದಿಸಲು ಹಣವಿಲ್ಲದ ಪರಿಸ್ಥಿತಿ ನಿರ್ಮಾಣವಾಗಿತ್ತು. ಈ ಹಿನ್ನೆಲೆಯಲ್ಲಿ ಸರ್ಕಾರವೇ ನಿಗಮಗಳಿಗೆ ಹಣ ಬಿಡುಗಡೆ ಮಾಡಬೇಕಾಯಿತು ಎಂದು ತಿಳಿಸಿದರು.

ಕೆಎಸ್‌ಆರ್‌ಟಿಸಿ ಬಸ್ ಪ್ರಯಾಣ ದರವನ್ನು ಸರಾಸರಿ ಶೇ.23ರಷ್ಟು ಹಾಗೂ ಬೆಂಗಳೂರಿನ ಬಿಎಂಟಿಸಿ ಬಸ್ ಪ್ರಯಾಣ ದರವನ್ನು ಶೇ.33ರಿಂದ 35ರಷ್ಟು ಹೆಚ್ಚಿಸಲಾಗಿದ್ದು, ಪರಿಷ್ಕೃತ ದರ ಬುಧವಾರ ಮಧ್ಯರಾತ್ರಿಯಿಂದ ಜಾರಿಗೆ ಬರಲಿದೆ ಎಂದು ತಿಳಿಸಲಾಗಿದೆ. ದರ ಏರಿಕೆಯಿಂದ ಕೆಲವು ಪ್ರಯಾಣ ಹಂತಗಳಲ್ಲಿ ₹2ರಿಂದ ₹3ರವರೆಗೆ ಹೆಚ್ಚುವರಿ ಹೊರೆ ಬೀಳಲಿದೆ ಎಂದು ಶಿವಕುಮಾರ್ ಹೇಳಿದರು.

ದರ ಏರಿಕೆ ವಿರೋಧಿಸಿ ಪ್ರತಿಭಟನೆಗೆ ಮುಂದಾಗಿರುವ ಬಿಜೆಪಿ ನಾಯಕರ ವಿರುದ್ಧ ವಾಗ್ದಾಳಿ ನಡೆಸಿದ ಅವರು, ಕೇಂದ್ರ ಸರ್ಕಾರ ಮೊದಲು ಪೆಟ್ರೋಲ್ ಮತ್ತು ಡೀಸೆಲ್ ಮೇಲಿನ ಸೆಸ್ ಕಡಿಮೆ ಮಾಡಲಿ. ಪ್ರಧಾನಿ ನರೇಂದ್ರ ಮೋದಿ ಅವರು ಇಂಧನ ಬೆಲೆ ಇಳಿಸಿದರೆ ಅದಕ್ಕೆ ಅನುಗುಣವಾಗಿ ರಾಜ್ಯದಲ್ಲಿಯೂ ಬಸ್ ಪ್ರಯಾಣ ದರ ಕಡಿಮೆ ಮಾಡಲು ಸಿದ್ಧವಿದ್ದೇವೆ ಎಂದು ಹೇಳಿದರು.



ಇಂಧನ ಹಾಗೂ ಅಡುಗೆ ಅನಿಲದ ಬೆಲೆ ಏರಿಕೆಯಾದಾಗ ಮೌನವಾಗಿದ್ದ ಬಿಜೆಪಿ ನಾಯಕರು ಈಗ ಬಸ್ ದರ ಏರಿಕೆ ವಿರೋಧಿಸುತ್ತಿರುವುದು ಸರಿಯಲ್ಲ ಎಂದು ಟೀಕಿಸಿದರು.

ಇದೇ ವೇಳೆ ನಂದಿನಿ ಹಾಲಿನ ದರ ಏರಿಕೆಯನ್ನೂ ಸಮರ್ಥಿಸಿಕೊಂಡ ಅವರು, ಬರಗಾಲದಿಂದ ಸಂಕಷ್ಟದಲ್ಲಿರುವ ಹೈನುಗಾರರು ಹಾಗೂ ರೈತರಿಗೆ ನೆರವಾಗುವ ಉದ್ದೇಶದಿಂದ ಹಾಲಿನ ದರ ಹೆಚ್ಚಿಸಲಾಗಿದೆ ಎಂದು ತಿಳಿಸಿದರು.

2ನೇ ಪುಟಕ್ಕೆ

ರಾಘವ ಸರೋವರ ಯೋಜನೆಗೆ ಭೂಮಿಪೂಜೆ: 25 ಎಕರೆ ಪ್ರದೇಶದಲ್ಲಿ ಕೃತಕ ಸರೋವರ ನಿರ್ಮಾಣಕ್ಕೆ ಚಾಲನೆ

ಮಂತ್ರಾಲಯ, ನ.4: ಪ್ರಸಿದ್ಧ ಧಾರ್ಮಿಕ ಕ್ಷೇತ್ರ ಮಂತ್ರಾಲಯದಲ್ಲಿ ಪ್ರಕೃತಿ ಸಂರಕ್ಷಣೆ, ಪರಿಸರ ಜಾಗೃತಿ ಹಾಗೂ ಸಾರ್ವಜನಿಕರ ಅನುಕೂಲಕ್ಕಾಗಿ ರೂಪಿಸಲಾಗಿರುವ ಮಹತ್ವಾಕಾಂಕ್ಷೆಯ ರಾಘವ ಸರೋವರ ಯೋಜನೆಗೆ ಬುಧವಾರ ಭೂಮಿಪೂಜೆ ನೆರವೇರಿಸಲಾಯಿತು.



ಶ್ರೀ ರಾಘವೇಂದ್ರ ಸ್ವಾಮಿಗಳ ದಿವ್ಯ ಸನ್ನಿಧಿಯಲ್ಲಿ, ಮಂತ್ರಾಲಯದ ಶ್ರೀ ರಾಘವೇಂದ್ರ ಸ್ವಾಮಿ ಮಠದ ಪೀಠಾಧಿಪತಿ ಶ್ರೀ ಸುಬುಧೇಂದ್ರ ತೀರ್ಥ ಸ್ವಾಮೀಜಿಯವರ ಮಾರ್ಗದರ್ಶನ ಹಾಗೂ ಆಶೀರ್ವಾದದೊಂದಿಗೆ ಯೋಜನೆಯ ಭೂಮಿಪೂಜೆ ಕಾರ್ಯಕ್ರಮ ನಡೆಯಿತು.

ಮಂತ್ರಾಲಯದ ಪವಿತ್ರ ಪರಿಸರದಲ್ಲಿ ಸುಮಾರು 25 ಎಕರೆ ಪ್ರದೇಶದಲ್ಲಿ ರಾಘವ ಸರೋವರ ಯೋಜನೆಯನ್ನು ಅಭಿವೃದ್ಧಿಪಡಿಸಲು ಉದ್ದೇಶಿಸಲಾಗಿದೆ. ಯೋಜನೆಯಡಿ ಸುಂದರವಾದ ಕೃತಕ ಸರೋವರ ನಿರ್ಮಾಣದ ಜೊತೆಗೆ ಸುತ್ತಮುತ್ತ ಹಸಿರು ವಾತಾವರಣ ಸೃಷ್ಟಿಸುವುದು, ಪರಿಸರ ಸಂರಕ್ಷಣೆಗೆ ಪೂರಕವಾದ ಸೌಲಭ್ಯಗಳನ್ನು ಕಲ್ಪಿಸುವುದು ಹಾಗೂ ಭಕ್ತರು ಮತ್ತು ಪ್ರವಾಸಿಗರಿಗೆ ಶಾಂತಿಯುತ ನೈಸರ್ಗಿಕ ಪರಿಸರ ಒದಗಿಸುವ ಗುರಿ ಹೊಂದಲಾಗಿದೆ.

ಮಂತ್ರಾಲಯಕ್ಕೆ ಪ್ರತಿನಿತ್ಯ ವಿವಿಧ ರಾಜ್ಯಗಳಿಂದ ಸಾವಿರಾರು ಭಕ್ತರು ಆಗಮಿಸುತ್ತಿದ್ದು, ಧಾರ್ಮಿಕ ಕ್ಷೇತ್ರದ ಸೌಂದರ್ಯವನ್ನು

2ನೇ ಪುಟಕ್ಕೆ

ಕುಡಿಯುವ ನೀರಿನ ಸಮಸ್ಯೆ ಎದುರಾಗದಂತೆ ಮುಂಜಾಗ್ರತಾ ಕ್ರಮ ಕೈಗೊಳ್ಳಿ: ಎನ್.ಎಸ್. ಬೋಸರಾಜು

ಮಾನ್ವಿ: ತೀವ್ರ ಬರಗಾಲದ ಹಿನ್ನೆಲೆಯಲ್ಲಿ ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಹಾಗೂ ಸಿಬ್ಬಂದಿ ವಿಶೇಷ ಕಾಳಜಿ ವಹಿಸಬೇಕು. ಮುಂದಿನ ಏಳು ತಿಂಗಳ ಕಾಲ ಯಾವುದೇ ಗ್ರಾಮದಲ್ಲಿ ಕುಡಿಯುವ ನೀರಿನ ಕೊರತೆ ಎದುರಾಗದಂತೆ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಮಾಜಿ ಸಚಿವ ಹಾಗೂ ವಿಧಾನ ಪರಿಷತ್ ಸದಸ್ಯ ಎನ್.ಎಸ್. ಬೋಸರಾಜು ಸೂಚಿಸಿದರು.



ನಗರದ ಶಾಸಕರ ಸಭಾಂಗಣದಲ್ಲಿ ಶಾಸಕ ಜಿ. ಹಂಪಯ್ಯ ನಾಯಕ ಅವರೊಂದಿಗೆ ಮಾನ್ವಿ ತಾಲೂಕಿನ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಹಾಗೂ ಸಿಬ್ಬಂದಿಗಳ ಸಭೆ ನಡೆಸಿ, ಕುಡಿಯುವ ನೀರಿನ ಪೂರೈಕೆ ಮತ್ತು ಗ್ರಾಮೀಣ ಮೂಲಸೌಕರ್ಯಗಳ ಸ್ಥಿತಿಗತಿ ಕುರಿತು ಪರಿಶೀಲಿಸಿದರು.

ಸಭೆಯಲ್ಲಿ ಮಾತನಾಡಿದ ಬೋಸರಾಜು, ತೀವ್ರ ಬರಗಾಲದಿಂದ ಗ್ರಾಮೀಣ ಜನರು ಸಂಕಷ್ಟ ಎದುರಿಸುತ್ತಿದ್ದಾರೆ. ಇಂತಹ ಸಂದರ್ಭದಲ್ಲಿ ಅಧಿಕಾರಿಗಳು ಹೆಚ್ಚಿನ ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು. ಪ್ರತಿಯೊಂದು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕುಡಿಯುವ ನೀರಿನ ಮೂಲಗಳು, ಕೊಳವೆಬಾವಿಗಳ ಸ್ಥಿತಿಗತಿ ಹಾಗೂ ನೀರಿನ ಲಭ್ಯತೆಯ ಕುರಿತು ಸಮಗ್ರ ಮಾಹಿತಿ ಹೊಂದಿರಬೇಕು ಎಂದು ತಿಳಿಸಿದರು.

ಮುಂದಿನ ಏಳು ತಿಂಗಳಲ್ಲಿ ನೀರಿನ ಸಮಸ್ಯೆ ಉಂಟಾಗುವ ಸಾಧ್ಯತೆಯಿರುವ ಗ್ರಾಮಗಳನ್ನು ಮುಂಚಿತವಾಗಿ ಗುರುತಿಸಿ ಪರ್ಯಾಯ ವ್ಯವಸ್ಥೆ ಕಲ್ಪಿಸಬೇಕು. ಯಾವುದೇ ಸಮಸ್ಯೆ ಎದುರಾದರೆ ತಕ್ಷಣ ಶಾಸಕರನ್ನು ಅಥವಾ ತಮ್ಮನ್ನು ಸಂಪರ್ಕಿಸಬೇಕು. ಸಮಸ್ಯೆ ಪರಿಹಾರಕ್ಕೆ ಅಗತ್ಯ ಸಹಕಾರ ನೀಡಲಾಗುವುದು ಎಂದು ಭರವಸೆ ನೀಡಿದರು.

ಮಾನ್ವಿ ವಿಧಾನಸಭಾ ಕ್ಷೇತ್ರದಲ್ಲಿ ಕುಡಿಯುವ ನೀರಿನ ಸಮಸ್ಯೆ ನಿವಾರಣೆಗಾಗಿ ಸರ್ಕಾರ ಈಗಾಗಲೇ 39 ಹೊಸ ಕೊಳವೆಬಾವಿಗಳನ್ನು ಕೊರೆಯಲು ಅನುಮತಿ ನೀಡಿದೆ. ಅಗತ್ಯವಿದ್ದಲ್ಲಿ ಹೆಚ್ಚುವರಿ ಸೌಲಭ್ಯ ಕಲ್ಪಿಸಲು ಕ್ರಮ ಕೈಗೊಳ್ಳಲಾಗುವುದು. ಪಿಡಿಒಗಳು ತಮ್ಮ ಕೇಂದ್ರ ಸ್ಥಾನದಲ್ಲಿಯೇ ಇದ್ದು ಸಾರ್ವಜನಿಕರ ಸಮಸ್ಯೆಗಳಿಗೆ ತಕ್ಷಣ

2ನೇ ಪುಟಕ್ಕೆ

ಹಿಂದುಳಿದ ವರ್ಗಗಳ ಮೀಸಲಾತಿಯಲ್ಲಿ ಅನ್ಯಾಯ: ಕಾನೂನು ಹೋರಾಟದ ಎಚ್ಚರಿಕೆ

ರಾಯಚೂರು, ನ.4: ಮುಂಬರುವ ಜಿಲ್ಲಾ ಪಂಚಾಯಿತಿ ಹಾಗೂ ತಾಲೂಕು ಪಂಚಾಯಿತಿ ಚುನಾವಣೆಗಳಲ್ಲಿ ನ್ಯಾಯಮೂರ್ತಿ ಕೆ. ಭಕ್ತವತ್ಸಲ ಆಯೋಗದ ಶಿಫಾರಸು ಮತ್ತು ರಾಜ್ಯ ಸಚಿವ ಸಂಪುಟದ ತೀರ್ಮಾನಕ್ಕೆ ಅನುಗುಣವಾಗಿ ಇತರ ಹಿಂದುಳಿದ ವರ್ಗಗಳಿಗೆ ಶೇ.32ರಷ್ಟು ಮೀಸಲಾತಿ ಕಲ್ಪಿಸಬೇಕು. ಇಲ್ಲದಿದ್ದರೆ ಚುನಾವಣಾ ಪ್ರಕ್ರಿಯೆಯನ್ನು ಬಹಿಷ್ಕರಿಸಿ ನ್ಯಾಯಾಲಯದ ಮೊರೆ ಹೋಗಬೇಕಾಗುತ್ತದೆ ಎಂದು ರಾಯಚೂರು ಜಿಲ್ಲಾ ಹಿಂದುಳಿದ ಜಾತಿಗಳ ಒಕ್ಕೂಟದ ನ್ಯಾಯವಾದಿಗಳ ಘಟಕದ ಅಧ್ಯಕ್ಷ ಹಾಗೂ ಹಿರಿಯ ವಕೀಲ ಶ್ರೀಕಾಂತ ರಾವ್ ಎಚ್ಚರಿಸಿದರು.

ನಗರದ ಪತ್ರಿಕಾ ಭವನದಲ್ಲಿ ಬುಧವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸ್ಥಳೀಯ ಸಂಸ್ಥೆಗಳ ಚುನಾವಣೆಗಳಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಇತರ ಹಿಂದುಳಿದ ವರ್ಗಗಳಿಗೆ ಸಂವಿಧಾನಬದ್ಧವಾಗಿ ಮೀಸಲಾತಿ ಕಲ್ಪಿಸುವ ಸಂಬಂಧ ಸರ್ವೋಚ್ಚ ನ್ಯಾಯಾಲಯ ನೀಡಿರುವ ಮಾರ್ಗಸೂಚಿಗಳ ಅನುಸಾರ ರಾಜ್ಯ ಸರ್ಕಾರ ಕ್ರಮ ಕೈಗೊಳ್ಳಬೇಕಾಗಿದೆ. ಆದರೆ, ಜಿಲ್ಲಾ ಮತ್ತು ತಾಲೂಕು ಪಂಚಾಯಿತಿಗಳ ಕ್ಷೇತ್ರವಾರು ಮೀಸಲಾತಿ ನಿಗದಿಯಲ್ಲಿ ಹಿಂದುಳಿದ ವರ್ಗಗಳಿಗೆ ಅನ್ಯಾಯವಾಗುತ್ತಿದೆ ಎಂದು ಆರೋಪಿಸಿದರು.



ಸರ್ವೋಚ್ಚ ನ್ಯಾಯಾಲಯದ ನಿರ್ದೇಶನದ ಹಿನ್ನೆಲೆಯಲ್ಲಿ 2022ರಲ್ಲಿ ಅಂದಿನ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ನೇತೃತ್ವದ ಸರ್ಕಾರವು ನ್ಯಾಯಮೂರ್ತಿ ಕೆ. ಭಕ್ತವತ್ಸಲ ಅವರ ಅಧ್ಯಕ್ಷತೆಯಲ್ಲಿ ಆಯೋಗವನ್ನು ರಚಿಸಿತ್ತು. ಸ್ಥಳೀಯ ಸಂಸ್ಥೆಗಳಲ್ಲಿ ಹಿಂದುಳಿದ ವರ್ಗಗಳ ರಾಜಕೀಯ ಪ್ರಾತಿನಿಧ್ಯ ಮತ್ತು ಮೀಸಲಾತಿ ಕುರಿತು ಅಧ್ಯಯನ ನಡೆಸಿದ ಆಯೋಗವು ಸರ್ಕಾರಕ್ಕೆ ವರದಿ ಸಲ್ಲಿಸಿತ್ತು ಎಂದು ವಿವರಿಸಿದರು.

2023ರಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರವು ಆಯೋಗದ ವರದಿಯನ್ನು ಸಚಿವ

2ನೇ ಪುಟಕ್ಕೆ

ಮಾದಕ ವ್ಯಸನಮುಕ್ತ ಸಮಾಜ ನಿರ್ಮಾಣಕ್ಕೆ ಎಲ್ಲರೂ ಕೈಜೋಡಿಸಿ: ಜಿಲ್ಲಾಧಿಕಾರಿ ಪೂವಿತಾ ಎಸ್.

ರಾಯಚೂರು, ನ.4: ಮಾದಕ ವಸ್ತುಗಳು, ತಂಬಾಕು ಹಾಗೂ ಇತರ ವ್ಯಸನಗಳು ಯುವಜನರ ಭವಿಷ್ಯಕ್ಕೆ ಮಾರಕವಾಗಿದ್ದು, ಪ್ರತಿಯೊಬ್ಬರೂ ದುಶ್ಚಟಗಳಿಂದ ದೂರವಿದ್ದು ಆರೋಗ್ಯಕರ ಜೀವನ ನಡೆಸುವ ಮೂಲಕ ನಶೆಮುಕ್ತ ರಾಯಚೂರು ನಿರ್ಮಾಣಕ್ಕೆ ಸಹಕರಿಸಬೇಕು ಎಂದು ಜಿಲ್ಲಾಧಿಕಾರಿ ಪೂವಿತಾ ಎಸ್. ಕರೆ ನೀಡಿದರು.

ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿ ಆವರಣದಲ್ಲಿ ಬುಧವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಮಹಾನಗರ ಪಾಲಿಕೆ, ಪೊಲೀಸ್ ಇಲಾಖೆ, ರಿಮ್ಸ್ ಬೋಧಕ ಆಸ್ಪತ್ರೆ, ನವೋದಯ ವೈದ್ಯಕೀಯ ಮಹಾವಿದ್ಯಾಲಯ, ಎ.ಎಂ.ಇ. ದಂತ ವೈದ್ಯಕೀಯ ಕಾಲೇಜು ಹಾಗೂ ವಿವಿಧ ಸಂಘ-ಸಂಸ್ಥೆಗಳ ಸಹಯೋಗದಲ್ಲಿ ಆಯೋಜಿಸಿದ್ದ ನಶಾ ಮುಕ್ತ ರಾಯಚೂರು ಅಭಿಯಾನ ಮತ್ತು ತಂಬಾಕು ಮುಕ್ತ ಯುವ ಅಭಿಯಾನ 4.0ರ ಜಾಗೃತಿ ನಡಿಗೆಗೆ ಚಾಲನೆ ನೀಡಿ ಅವರು ಮಾತನಾಡಿದರು.

ಮಾದಕ ವಸ್ತುಗಳ ವ್ಯಸನವು ವ್ಯಕ್ತಿಯ ದೈಹಿಕ ಹಾಗೂ ಮಾನಸಿಕ ಆರೋಗ್ಯವನ್ನು ಹದಗೆಡಿಸುವುದರ ಜೊತೆಗೆ ಕುಟುಂಬದ ನೆಮ್ಮದಿ, ಆರ್ಥಿಕ ಸ್ಥಿರತೆ ಮತ್ತು ಸಾಮಾಜಿಕ ಬದುಕಿನ ಮೇಲೂ ಗಂಭೀರ ಪರಿಣಾಮ ಬೀರುತ್ತದೆ. ವಿಶೇಷವಾಗಿ ಯುವಜನರು ಕ್ಷಣಿಕ ಆಕರ್ಷಣೆಗೆ ಒಳಗಾಗಿ ದುಶ್ಚಟಗಳ ದಾಸರಾಗದೆ ಶಿಕ್ಷಣ, ಕ್ರೀಡೆ ಹಾಗೂ ಸೃಜನಶೀಲ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ವ್ಯಸನಮುಕ್ತ ಸಮಾಜ ನಿರ್ಮಾಣವು ಕೇವಲ ಸರ್ಕಾರ ಅಥವಾ ಆರೋಗ್ಯ ಇಲಾಖೆಯ ಜವಾಬ್ದಾರಿಯಲ್ಲ. ಶಾಲಾ-ಕಾಲೇಜುಗಳು, ಗ್ರಾಮ ಪಂಚಾಯಿತಿಗಳು, ಸಂಘ-ಸಂಸ್ಥೆಗಳು, ಪಾಲಕರು ಹಾಗೂ ಸಾರ್ವಜನಿಕರು ಸಂಘಟಿತ ಪ್ರಯತ್ನ ನಡೆಸಿದಾಗ ಮಾತ್ರ ಮಾದಕ ವಸ್ತುಗಳ ಹಾವಳಿಯನ್ನು ಪರಿಣಾಮಕಾರಿಯಾಗಿ ನಿಯಂತ್ರಿಸಲು ಸಾಧ್ಯ. ಪ್ರತಿಯೊಬ್ಬರೂ ತಮ್ಮ ಕುಟುಂಬ ಮತ್ತು ಸುತ್ತಮುತ್ತಲಿನ ಜನರಲ್ಲಿ ಜಾಗೃತಿ ಮೂಡಿಸಬೇಕು ಎಂದು ಹೇಳಿದರು.



ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯದ ಮಾರ್ಗದರ್ಶನದಲ್ಲಿ ಅಕ್ಟೋಬರ್ 28ರಿಂದ ಡಿಸೆಂಬರ್ 26ರವರೆಗೆ 60 ದಿನಗಳ ಕಾಲ ತಂಬಾಕು ಮುಕ್ತ ಯುವ ಅಭಿಯಾನ 4.0 ಹಮ್ಮಿಕೊಳ್ಳಲಾಗಿದೆ. ಯುವಜನರನ್ನು ತಂಬಾಕು ಹಾಗೂ ನಿಕೋಟಿನ್ ವ್ಯಸನದಿಂದ ರಕ್ಷಿಸುವುದು, ತಂಬಾಕು ಸೇವನೆಯ ದುಷ್ಪರಿಣಾಮಗಳ ಕುರಿತು ಅರಿವು ಮೂಡಿಸುವುದು ಮತ್ತು ತಂಬಾಕು ನಿಯಂತ್ರಣ ಕಾಯ್ದೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವುದು ಅಭಿಯಾನದ ಪ್ರಮುಖ ಉದ್ದೇಶವಾಗಿದೆ ಎಂದು ತಿಳಿಸಲಾಯಿತು.

ಅಭಿಯಾನದ ಭಾಗವಾಗಿ ಶಾಲಾ-ಕಾಲೇಜುಗಳನ್ನು

2ನೇ ಪುಟಕ್ಕೆ

ನೂತನ ಎಕ್ಸ್‌ಪ್ರೆಸ್ ಬಸ್ ನಿಲ್ದಾಣ ಕಾಮಗಾರಿ ಪರಿಶೀಲಿಸಿದ ಎನ್.ಎಸ್. ಬೋಸರಾಜು

ಮಾನ್ವಿ: ಪಟ್ಟಣದ ಬಸವ ವೃತ್ತದಲ್ಲಿ ನಿರ್ಮಾಣವಾಗುತ್ತಿರುವ ನೂತನ ಎಕ್ಸ್‌ಪ್ರೆಸ್ ಬಸ್ ನಿಲ್ದಾಣದ ಕಾಮಗಾರಿಯನ್ನು ವಿಧಾನ ಪರಿಷತ್ ಸದಸ್ಯ ಹಾಗೂ ಮಾಜಿ ಸಚಿವ ಎನ್.ಎಸ್. ಬೋಸರಾಜು ಪರಿಶೀಲಿಸಿ, ಕಾಮಗಾರಿಯನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.



ಬಸ್ ನಿಲ್ದಾಣದ ಕಾಮಗಾರಿ ಮಂದಗತಿಯಲ್ಲಿ ಸಾಗುತ್ತಿರುವುದರಿಂದ ಸಾರ್ವಜನಿಕರು ಹಾಗೂ ಪ್ರಯಾಣಿಕರಿಗೆ ಅನಾನುಕೂಲವಾಗುತ್ತಿದೆ. ಆದ್ದರಿಂದ ಕಾಮಗಾರಿಗೆ ವೇಗ ನೀಡುವ ಮೂಲಕ ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಈಶಾನ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಎಲೆಕ್ಟ್ರಿಕಲ್ ವಿಭಾಗದ ಅಭಿಯಂತರ ಬಸವರಾಜ ಅವರಿಂದ ಕಾಮಗಾರಿಯ ಪ್ರಗತಿ ಕುರಿತು ಮಾಹಿತಿ ಪಡೆದ ಬೋಸರಾಜು, ಗುತ್ತಿಗೆದಾರರಿಂದ ಕಾಮಗಾರಿಯ ಮುಂದಿನ ಹಂತದ ನೀಲನಕ್ಷೆಯನ್ನು ಕೂಡಲೇ ಸಲ್ಲಿಸುವಂತೆ ಸೂಚಿಸಿದರು.

ಬಸ್ ನಿಲ್ದಾಣದ ನಿರ್ಮಾಣ ಕಾರ್ಯದಲ್ಲಿ ಅನಗತ್ಯ ವಿಳಂಬವಾಗದಂತೆ ಅಧಿಕಾರಿಗಳು ಗಮನಹರಿಸಬೇಕು. ಸಾರ್ವಜನಿಕರಿಗೆ ಅನುಕೂಲವಾಗುವ ರೀತಿಯಲ್ಲಿ ಕಾಮಗಾರಿಯನ್ನು ಪೂರ್ಣಗೊಳಿಸಲು ಆದ್ಯತೆ ನೀಡಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಶಾಸಕ ಜಿ. ಹಂಪಯ್ಯ ನಾಯಕ, ಮಾನ್ವಿ ಸಾರಿಗೆ ಘಟಕದ ವ್ಯವಸ್ಥಾಪಕ ಎಂ. ನಾಗರಾಜ, ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಅಬ್ದುಲ್ ಗಾಫೂರ್ ಸಾಬ್, ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಬಿ.ಕೆ. ಅಮರೇಶಪ್ಪ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಜನಗಣತಿ ಕಾರ್ಯವನ್ನು ನಿಖರವಾಗಿ, ಪ್ರಾಮಾಣಿಕವಾಗಿ ನಿರ್ವಹಿಸಿ: ಜಿಲ್ಲಾಧಿಕಾರಿ ಪೂವಿತಾ ಎಸ್.

ರಾಯಚೂರು, ನ. 4: ದೇಶದ ಅಭಿವೃದ್ಧಿ ಯೋಜನೆಗಳ ರೂಪಿಸುವಿಕೆ ಹಾಗೂ ಜನಸಂಖ್ಯೆಗೆ ಸಂಬಂಧಿಸಿದ ಸಮಗ್ರ ಮಾಹಿತಿ ಸಂಗ್ರಹಣೆಯಲ್ಲಿ ಜನಗಣತಿ ಅತ್ಯಂತ ಮಹತ್ವದ ಪಾತ್ರ ವಹಿಸುತ್ತದೆ. ಆದ್ದರಿಂದ ಜನಗಣತಿ ಕಾರ್ಯಕ್ಕೆ ನಿಯೋಜನೆಗೊಂಡಿರುವ ಅಧಿಕಾರಿಗಳು ಮತ್ತು ಸಿಬ್ಬಂದಿ ತಮ್ಮ ಜವಾಬ್ದಾರಿಯನ್ನು ಅರಿತು ನಿಖರತೆ, ಪಾರದರ್ಶಕತೆ ಹಾಗೂ ಪ್ರಾಮಾಣಿಕತೆಯಿಂದ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಪೂವಿತಾ ಎಸ್. ಸೂಚಿಸಿದರು.



ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಜನಗಣತಿ2027ರ ಎರಡನೇ ಹಂತದ ಜನಸಂಖ್ಯೆ ಗಣತಿಗೆ ಸಂಬಂಧಿಸಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು, ಚಾರ್ಜ್ ಅಧಿಕಾರಿಗಳು ಹಾಗೂ ಸಿಬ್ಬಂದಿಗಾಗಿ ಆಯೋಜಿಸಿದ್ದ ಎರಡು ದಿನಗಳ ತರಬೇತಿ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ದೇಶದಲ್ಲಿ ಇದೇ ಮೊದಲ ಬಾರಿಗೆ ಡಿಜಿಟಲ್ ತಂತ್ರಜ್ಞಾನದ ಮೂಲಕ ಜನಗಣತಿ ನಡೆಸಲಾಗುತ್ತಿದೆ. 2011ರಲ್ಲಿ ನಡೆದ ಜನಗಣತಿಯನ್ನು ಸಾಂಪ್ರದಾಯಿಕ ವಿಧಾನದಲ್ಲಿ ಕೈಗೊಳ್ಳಲಾಗಿತ್ತು. ಆದರೆ ಈ ಬಾರಿ ಡಿಜಿಟಲ್ ವ್ಯವಸ್ಥೆಯನ್ನು ಅಳವಡಿಸಿಕೊಂಡಿರುವುದರಿಂದ ಮಾಹಿತಿ ಸಂಗ್ರಹಣೆಯಲ್ಲಿ ಹೆಚ್ಚಿನ ನಿಖರತೆ ಮತ್ತು ಪಾರದರ್ಶಕತೆ ಕಾಯ್ದುಕೊಳ್ಳುವುದು ಅಗತ್ಯವಾಗಿದೆ. ಕೆಳಹಂತದ ಸಿಬ್ಬಂದಿಯಿಂದ ಉನ್ನತ ಮಟ್ಟದ ಅಧಿಕಾರಿಗಳವರೆಗೆ ಪ್ರತಿಯೊಬ್ಬರೂ ಸಮನ್ವಯದಿಂದ ಕಾರ್ಯನಿರ್ವಹಿಸಿದಾಗ ಮಾತ್ರ ಈ ಬೃಹತ್ ಕಾರ್ಯ ಯಶಸ್ವಿಯಾಗಲಿದೆ ಎಂದು ತಿಳಿಸಿದರು.

ಡಿಜಿಟಲ್ ವಿಧಾನದಲ್ಲಿ ಜನಗಣತಿ ನಡೆಸುವುದು ಆರಂಭದಲ್ಲಿ ಸವಾಲಿನ ಕೆಲಸವೆನಿಸಬಹುದು. ಆದರೆ ಸೂಕ್ತ ತರಬೇತಿ ಹಾಗೂ ನಿರಂತರ

2ನೇ ಪುಟಕ್ಕೆ

ಜಿಲ್ಲಾ 12ನೇ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಸಕಲ ಸಿದ್ಧತೆ: ಎನ್.ಎಸ್. ಬೋಸರಾಜು

ರಾಯಚೂರು, ನ.4: ರಾಯಚೂರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ನವೆಂಬರ್ 14 ಮತ್ತು 15ರಂದು ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಆಯೋಜಿಸಿರುವ 12ನೇ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಸಕಲ ಸಿದ್ಧತೆಗಳನ್ನು ಕೈಗೊಳ್ಳಲಾಗಿದ್ದು, ಜಿಲ್ಲೆಯ ಸಾಹಿತಿಗಳು, ಕನ್ನಡಾಭಿಮಾನಿಗಳು, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಸಮ್ಮೇಳನವನ್ನು ಯಶಸ್ವಿಗೊಳಿಸಬೇಕು ಎಂದು ಮಾಜಿ ಸಚಿವ, ವಿಧಾನ ಪರಿಷತ್ ಸದಸ್ಯ ಹಾಗೂ ಸಮ್ಮೇಳನ ಸ್ವಾಗತ ಸಮಿತಿ ಅಧ್ಯಕ್ಷ ಎನ್.ಎಸ್. ಬೋಸರಾಜು ಮನವಿ ಮಾಡಿದರು.



ನಗರದ ಕನ್ನಡ ಭವನದಲ್ಲಿ ಬುಧವಾರ ಆಯೋಜಿಸಿದ್ದ ಪತ್ರಿಕಾಗೋಷ್ಠಿಯಲ್ಲಿ ಸಮ್ಮೇಳನದ ಆಮಂತ್ರಣ ಪತ್ರಿಕೆಯನ್ನು ಬಿಡುಗಡೆಗೊಳಿಸಿ ಅವರು ಮಾತನಾಡಿದರು.

ರಾಯಚೂರು ಜಿಲ್ಲೆಯಲ್ಲಿ ಹಲವು ವರ್ಷಗಳಿಂದ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನ ಆಯೋಜಿಸಲು ಸಾಧ್ಯವಾಗಿರಲಿಲ್ಲ. ಈ ಹಿನ್ನೆಲೆಯಲ್ಲಿ ಜಿಲ್ಲೆಯ ಸಾಹಿತ್ಯಿಕ, ಸಾಂಸ್ಕೃತಿಕ ಹಾಗೂ ಐತಿಹಾಸಿಕ ಪರಂಪರೆಯನ್ನು ಪರಿಚಯಿಸುವ ಉದ್ದೇಶದಿಂದ ಈ ಬಾರಿ ಎರಡು ದಿನಗಳ ಕಾಲ ಅರ್ಥಪೂರ್ಣವಾಗಿ ಹಾಗೂ ಅದ್ದೂರಿಯಾಗಿ ಸಮ್ಮೇಳನ ಆಯೋಜಿಸಲಾಗುತ್ತಿದೆ. ಸಮ್ಮೇಳನದ ಯಶಸ್ಸಿಗೆ ಅಗತ್ಯವಿರುವ ಎಲ್ಲ ಸಿದ್ಧತೆಗಳನ್ನು ಕೈಗೊಳ್ಳಲಾಗಿದ್ದು, ವಿವಿಧ ಸಮಿತಿಗಳನ್ನು ರಚಿಸಿ ಜವಾಬ್ದಾರಿಗಳನ್ನು ಹಂಚಿಕೆ ಮಾಡಲಾಗಿದೆ ಎಂದು ತಿಳಿಸಿದರು.

ಕನ್ನಡ ಭಾಷೆ, ಸಾಹಿತ್ಯ, ಸಂಸ್ಕೃತಿ ಹಾಗೂ ಕಲೆಯ ಬೆಳವಣಿಗೆಗೆ ಸಾಹಿತ್ಯ ಸಮ್ಮೇಳನಗಳು ಮಹತ್ವದ ವೇದಿಕೆಯಾಗಿವೆ. ಜಿಲ್ಲೆಯ ಹಿರಿಯ ಸಾಹಿತಿಗಳು, ಕವಿಗಳು, ಚಿಂತಕರು, ಕಲಾವಿದರು ಹಾಗೂ ಯುವ ಬರಹಗಾರರನ್ನು ಒಂದೇ ವೇದಿಕೆಯಲ್ಲಿ ಒಗ್ಗೂಡಿಸುವ ಪ್ರಯತ್ನ ಮಾಡಲಾಗುತ್ತಿದೆ. ಸಾಹಿತ್ಯ ಸಮ್ಮೇಳನವು ಕೇವಲ ಸಾಹಿತಿಗಳಿಗೆ ಸೀಮಿತವಾಗದೆ ಜಿಲ್ಲೆಯ ಪ್ರತಿಯೊಬ್ಬ ಕನ್ನಡಿಗನ ಹಬ್ಬವಾಗಬೇಕು ಎಂಬುದು ನಮ್ಮ ಆಶಯವಾಗಿದೆ ಎಂದರು.

ಸಮ್ಮೇಳನದ ಅಂಗವಾಗಿ ನಗರದ ಮಹಿಳಾ ಸಮಾಜದಿಂದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದವರೆಗೆ ಸಮ್ಮೇಳನಾಧ್ಯಕ್ಷರ ಭವ್ಯ ಮೆರವಣಿಗೆ ಹಮ್ಮಿಕೊಳ್ಳಲಾಗಿದೆ. ಕನ್ನಡ ನಾಡಿನ ಕಲೆ, ಸಾಹಿತ್ಯ, ಜಾನಪದ ಹಾಗೂ ಸಾಂಸ್ಕೃತಿಕ ವೈಭವವನ್ನು ಪ್ರತಿಬಿಂಬಿಸುವ ರೀತಿಯಲ್ಲಿ ಮೆರವಣಿಗೆ ಆಯೋಜಿಸಲಾಗುತ್ತಿದೆ. ಕನ್ನಡಪರ ಸಂಘಟನೆಗಳು, ವಿವಿಧ ಶಿಕ್ಷಣ ಸಂಸ್ಥೆಗಳು, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು

2ನೇ ಪುಟಕ್ಕೆ

ಸಂಘಟನಾ ಚತುರ ಅಭಿಷೇಕ ಸುರೇಶ ಹುಡೇದ್‌ಗೆ ರಾಜ್ಯೋತ್ಸವ ಪ್ರಶಸ್ತಿಯ ಗರಿ



ದೇವದುರ್ಗ: ಕನ್ನಡ ನಾಡು ದೇಶದಲ್ಲಿಯೇ ವಿಶಿಷ್ಟವಾದ ರಾಜ್ಯ. ಇದು ಸಾಧಕರ ಕರ್ಮಭೂಮಿಯೂ, ಸಾಧುಸಂತರ ಪುಣ್ಯಭೂಮಿಯೂ ಹೌದು. ಸಾಧಕರಿಗೆ ಕನ್ನಡನಾಡೇ ದಿವ್ಯಭೂಮಿ. ನಮ್ಮ ನಾಡಿನ ಇತಿಹಾಸವೇ ಸ್ಫೂರ್ತಿದಾಯಕ. ಚಿನ್ನ-ಬೆಳ್ಳಿಯನ್ನು ರಸ್ತೆಗಳಲ್ಲಿ ರಾಶಿಗಟ್ಟಲೆ ತೂಗಿ ಮಾರುತ್ತಿದ್ದ ವಿಜಯನಗರ ಸಾಮ್ರಾಜ್ಯ, ಕನ್ನಡಿಗರನ್ನು ಒಗ್ಗೂಡಿಸಿದ ಕನ್ನಡದ ಮೊದಲ ದೊರೆ ಮಯೂರವರ್ಮ, ಕನ್ನಡದ ಮೊದಲ ಶಿಲಾಶಾಸನವಾದ ಹಲ್ಮಿಡಿ ಶಾಸನ... ಹೀಗೆ ನೂರಾರು ಐತಿಹಾಸಿಕ ಹೆಜ್ಜೆಗುರುತುಗಳು ಕನ್ನಡ ನಾಡಿನ ಹಿರಿಮೆಯನ್ನು ಸಾರುತ್ತವೆ. ಅವುಗಳನ್ನು ನಿತ್ಯ ಸ್ಮರಿಸುತ್ತಾ ಭಾಷಾಭಿಮಾನದಿಂದ ಮುನ್ನಡೆಯುವುದು ಪ್ರತಿಯೊಬ್ಬ ಕನ್ನಡಿಗನ ಕರ್ತವ್ಯವಾಗಿದೆ.

ಹರಿದು ಹಂಚಿಹೋಗಿದ್ದ ಕನ್ನಡ ನಾಡು ಏಕೀಕರಣಗೊಂಡ ಇತಿಹಾಸವೇ ರೋಚಕ. 1956ರ ನವೆಂಬರ್ 1ರಂದು ಕನ್ನಡಿಗರ ಬಹುವರ್ಷಗಳ ಆಶಯದಂತೆ ಕನ್ನಡ ಭಾಷಿಕ ಪ್ರದೇಶಗಳು ಏಕೀಕರಣಗೊಂಡವು. ಆ ಶುಭದಿನವೇ ಕನ್ನಡ ರಾಜ್ಯೋತ್ಸವವಾಗಿ ಆಚರಣೆಗೆ ಬಂದಿತು. ನಾಡಿನ ಏಕೀಕರಣಕ್ಕಾಗಿ ಹೋರಾಡಿದ ಕನ್ನಡಪರ ಮನಸ್ಸುಗಳು ಸಂಭ್ರಮಿಸಿದ ಐತಿಹಾಸಿಕ ಕ್ಷಣವದು. ಇಂತಹ ಮಹತ್ವದ ಸಂದರ್ಭಕ್ಕೆ ಈಗ 71ನೇ ರಾಜ್ಯೋತ್ಸವದ ಸಂಭ್ರಮ. ಮೈಸೂರು ರಾಜ್ಯವೆಂದು ಕರೆಯಲ್ಪಡುತ್ತಿದ್ದ ನಮ್ಮ ನಾಡಿಗೆ 1973ರಲ್ಲಿ 'ಕರ್ನಾಟಕ' ಎಂದು ಮರುನಾಮಕರಣ ಮಾಡಿರುವುದು ಮರೆಯಲಾಗದ ಐತಿಹಾಸಿಕ ಸಂದರ್ಭವಾಗಿದೆ.

ಇಂತಹ ಭವ್ಯ ಇತಿಹಾಸ ಹೊಂದಿರುವ ಕನ್ನಡ ನಾಡಿಗೆ ತಮ್ಮದೇ ಆದ ವಿಶೇಷ ಕೊಡುಗೆ ನೀಡಿರುವ ಸಾಧಕರನ್ನು ಗುರುತಿಸಿ ಗೌರವಿಸುವ ಕಾರ್ಯವನ್ನು ರಾಯಚೂರು ಜಿಲ್ಲೆಯ ಕಲಾ ಸಂಕುಲ ಸಂಸ್ಥೆ ನಿರಂತರವಾಗಿ ಮಾಡುತ್ತಾ ಬಂದಿದೆ. ಅದರಂತೆ ಸಂಸ್ಥೆಯ ವತಿಯಿಂದ ನೀಡಲಾಗುವ ಈ ಬಾರಿಯ ರಾಜ್ಯಮಟ್ಟದ ಪ್ರತಿಷ್ಠಿತ ಕನ್ನಡ ರಾಜ್ಯೋತ್ಸವ ಪ್ರಶಸ್ತಿಗೆ ಕನ್ನಡದ ಕಂದ, ಸಂಘಟನಾ ಚತುರ, ಕಂದಾಯ ಇಲಾಖೆ ನೌಕರ ಹಾಗೂ ಸರ್ಕಾರಿ ನೌಕರರ ಸಂಘದ ಪದಾಧಿಕಾರಿ ಅಭಿಷೇಕ ಸುರೇಶ ಹುಡೇದ್ ಆಯ್ಕೆಯಾಗಿದ್ದಾರೆ.

ನವೆಂಬರ್ 8ರಂದು ಜಂಬಲದಿನ್ನಿ ರಂಗಮಂದಿರದಲ್ಲಿ ನಡೆಯಲಿರುವ 'ದೇಸಿ ಸಂಭ್ರಮ' ಸಮಾರಂಭದಲ್ಲಿ ಅವರಿಗೆ ಪ್ರಶಸ್ತಿ ಪ್ರದಾನ ಮಾಡಲಾಗುವುದು.

ಕೇವಲ ಕಚೇರಿ ಕೆಲಸಕ್ಕೆ ಸೀಮಿತವಾಗದೆ ಸಮಾಜಮುಖಿ ಚಟುವಟಿಕೆಗಳ ಮೂಲಕ ಗುರುತಿಸಿಕೊಂಡಿರುವ ಯುವ ಪ್ರತಿಭೆ ಅಭಿಷೇಕ ಸುರೇಶ ಹುಡೇದ್ ಅವರು 1997ರ ಏಪ್ರಿಲ್ 29ರಂದು ಜನಿಸಿದರು. ಮೂಲತಃ ಯಾದಗಿರಿ ಜಿಲ್ಲೆಯ ಶಹಾಪುರದವರಾದ ಇವರು ಸುರೇಶ ಹಾಗೂ ಕವಿತಾ ದಂಪತಿಯ ಪುತ್ರ. ಬಿ.ಎಸ್ಸಿ. ಪದವೀಧರರಾಗಿರುವ ಅಭಿಷೇಕ ಅವರು ಕಳೆದ 10 ವರ್ಷಗಳಿಂದ ದೇವದುರ್ಗದಲ್ಲಿ ಕಂದಾಯ ಇಲಾಖೆಯ ನೌಕರರಾಗಿ ಸೇವೆ ಸಲ್ಲಿಸುತ್ತಿದ್ದಾರೆ.

ಸರ್ಕಾರಿ ಕಡತಗಳ ನಿರ್ವಹಣೆ, ಪತ್ರ ವ್ಯವಹಾರ, ಸಾರ್ವಜನಿಕ ಯೋಜನೆಗಳ ಅನುಷ್ಠಾನ ಹಾಗೂ ಆಡಳಿತಾತ್ಮಕ ಕಾರ್ಯಗಳಲ್ಲಿ ಅನುಭವ ಹೊಂದಿರುವ ಅಭಿಷೇಕ ಸುರೇಶ ಹುಡೇದ್ ಅವರು ಸಂಘಟನಾ ಚಟುವಟಿಕೆಗಳಲ್ಲಿಯೂ ಸಕ್ರಿಯವಾಗಿ ಭಾಗವಹಿಸುತ್ತಿದ್ದಾರೆ. ಉತ್ತಮ ಜನಸಂಪರ್ಕ ಹಾಗೂ ಜವಾಬ್ದಾರಿಯುತ ಕಾರ್ಯನಿರ್ವಹಣೆಯ ಮೂಲಕ ಸಾರ್ವಜನಿಕರ ಮೆಚ್ಚುಗೆಗೆ ಪಾತ್ರರಾಗಿದ್ದಾರೆ.

ಪ್ರಸ್ತುತ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ದೇವದುರ್ಗ ತಾಲೂಕು ಘಟಕದ ಜಂಟಿ ಕಾರ್ಯದರ್ಶಿಯಾಗಿ ಹಾಗೂ ಕರ್ನಾಟಕ ರಾಜ್ಯ ಎನ್‌ಪಿಎಸ್ ನೌಕರರ ಸಂಘದ ತಾಲೂಕು ಘಟಕದ ಪ್ರಧಾನ ಕಾರ್ಯದರ್ಶಿಯಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಸಂಘಟನಾ ಅನುಭವದೊಂದಿಗೆ ಸರ್ಕಾರಿ ನೀತಿ, ನಿಯಮಗಳು ಹಾಗೂ ಕಾನೂನುಗಳ ಕುರಿತು ಉತ್ತಮ ಅರಿವು ಹೊಂದಿದ್ದಾರೆ.

ಇಲಾಖೆಯ ಕಾರ್ಯವೈಖರಿಯ ಬಗ್ಗೆ ಆಳವಾದ ಜ್ಞಾನ, ಒತ್ತಡದ ಸಂದರ್ಭದಲ್ಲಿಯೂ ಕೆಲಸ ನಿರ್ವಹಿಸುವ ಸಾಮರ್ಥ್ಯ, ದಿನದ 24 ಗಂಟೆಯೂ ಸೇವೆಗೆ ಸಿದ್ಧವಿರುವ ಮನೋಭಾವ, ಪ್ರಾಮಾಣಿಕತೆ ಮತ್ತು ನಿಷ್ಠೆ ಇವರ ಕಾರ್ಯವೈಖರಿಯ ವಿಶೇಷತೆಗಳಾಗಿವೆ. ಕಡಿಮೆ ಮಾತು, ಹೆಚ್ಚು ಕೆಲಸ ಎಂಬ ತತ್ವವನ್ನು ಅಳವಡಿಸಿಕೊಂಡಿರುವ ಅಭಿಷೇಕ ಅವರು ಸರ್ಕಾರಿ ಸೇವೆಯ ಜೊತೆಗೆ ಸಾಮಾಜಿಕ ಕಳಕಳಿಯನ್ನೂ ಹೊಂದಿದ್ದಾರೆ.

ಅಭಿಷೇಕ ಸುರೇಶ ಹುಡೇದ್ ಅವರ ಸೇವೆ ಹಾಗೂ ಸಂಘಟನಾ ಚಟುವಟಿಕೆಗಳನ್ನು ಗುರುತಿಸಿ ಕಲಾ ಸಂಕುಲ ಸಂಸ್ಥೆಯು ರಾಜ್ಯಮಟ್ಟದ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ನೀಡಿ ಗೌರವಿಸುತ್ತಿರುವುದು ಅಭಿನಂದನೀಯವಾಗಿದೆ. ದೇವದುರ್ಗದಂತಹ ಹಿಂದುಳಿದ ತಾಲೂಕಿನಲ್ಲಿ ಪ್ರಾಮಾಣಿಕವಾಗಿ, ಜನಪರವಾಗಿ ಕೆಲಸ ಮಾಡುತ್ತಿರುವ ಯುವ ನೌಕರನಿಗೆ ದೊರೆಯುತ್ತಿರುವ ಈ ಗೌರವ ಮತ್ತಷ್ಟು ಯುವಕರಿಗೆ ಸ್ಫೂರ್ತಿಯಾಗಲಿದೆ.

ಅಭಿಷೇಕ ಸುರೇಶ ಹುಡೇದ್ ಅವರು ಮುಂದಿನ ದಿನಗಳಲ್ಲಿಯೂ ಸರ್ಕಾರಿ ಸೇವೆ, ಸಂಘಟನೆ ಹಾಗೂ ಸಮಾಜಮುಖಿ ಕಾರ್ಯಗಳಲ್ಲಿ ಇನ್ನಷ್ಟು ಸಾಧನೆ ಮಾಡಿ ನಾಡಿಗೆ ಕೀರ್ತಿ ತರಲಿ ಎಂಬುದು ಎಲ್ಲರ ಆಶಯವಾಗಿದೆ.

ಅಮೃತ ವಾಣಿ

ನಿನ್ನ ಕಣ್ಣೀರಿಗೂ ದೇವರಲ್ಲಿ ಲೆಕ್ಕವಿದೆ, ನಿನ್ನ ನೋವಿಗೂ ಒಂದು ಅಂತ್ಯವಿದೆ.



ಮಾದಕ ವ್ಯಸನಮುಕ್ತ ಸಮಾಜ ನಿರ್ಮಾಣಕ್ಕೆ ಎಲ್ಲರೂ ಕೈಜೋಡಿಸಿ: ಜಿಲ್ಲಾಧಿಕಾರಿ ಪೂವಿತಾ ಎಸ್.

ತಂಬಾಕು ಮುಕ್ತ ಶಿಕ್ಷಣ ಸಂಸ್ಥೆಗಳನ್ನಾಗಿ ರೂಪಿಸುವುದು, ಆಯ್ದ ಗ್ರಾಮಗಳನ್ನು ತಂಬಾಕು ಮುಕ್ತ ಗ್ರಾಮಗಳನ್ನಾಗಿ ಅಭಿವೃದ್ಧಿಪಡಿಸುವುದು ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ನಿಷೇಧ ನಿಯಮಗಳನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುವುದು. ಶಿಕ್ಷಣ ಸಂಸ್ಥೆಗಳ 100 ಗಜಗಳ ವ್ಯಾಪ್ತಿಯಲ್ಲಿ ತಂಬಾಕು ಉತ್ಪನ್ನಗಳ ಮಾರಾಟ ತಡೆಯಲು ವಿಶೇಷ ಗಮನ ಹರಿಸಲಾಗುವುದು.

ಇದಲ್ಲದೆ, ವಿದ್ಯಾರ್ಥಿಗಳ ಸಹಭಾಗಿತ್ವದಲ್ಲಿ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸುವುದರ ಜೊತೆಗೆ ಸಾಮಾಜಿಕ ಜಾಲತಾಣಗಳು, ಕಿರುಚಿತ್ರಗಳು, ರೀಲ್ಸ್, ಆನ್‌ಲೈನ್ ರಸಪ್ರಶ್ನೆಗಳು ಹಾಗೂ ಡಿಜಿಟಲ್ ಮಾಧ್ಯಮಗಳ ಮೂಲಕ ಯುವಜನರಿಗೆ ತಂಬಾಕು ಮತ್ತು ಮಾದಕ ವಸ್ತುಗಳ ಅಪಾಯಗಳ ಕುರಿತು ಮಾಹಿತಿ ತಲುಪಿಸುವ ಉದ್ದೇಶ ಹೊಂದಲಾಗಿದೆ.

ಮಾದಕ ವಸ್ತುಗಳ ನಿರಂತರ ಸೇವನೆಯಿಂದ ಯಕೃತ್ತು, ಶ್ವಾಸಕೋಶ, ಹೃದಯ ಹಾಗೂ ಮೂತ್ರಪಿಂಡಗಳಿಗೆ ಹಾನಿಯಾಗುವ ಸಾಧ್ಯತೆಯಿದ್ದು, ಕ್ಯಾನ್ಸರ್, ಹೃದ್ರೋಗ, ಖಿನ್ನತೆ ಮತ್ತು ಇತರ ಮಾನಸಿಕ ಆರೋಗ್ಯ ಸಮಸ್ಯೆಗಳ ಅಪಾಯ ಹೆಚ್ಚಾಗುತ್ತದೆ. ವ್ಯಸನಕ್ಕೆ ಒಳಗಾದವರು ಅದನ್ನು ಮರೆಮಾಚದೆ ವೈದ್ಯಕೀಯ ಚಿಕಿತ್ಸೆ ಹಾಗೂ ಆಪ್ತ ಸಮಾಲೋಚನೆಯ ನೆರವು ಪಡೆದುಕೊಳ್ಳಬೇಕು ಎಂದು ಆರೋಗ್ಯ ಇಲಾಖೆ ಅಧಿಕಾರಿಗಳು ಸಲಹೆ ನೀಡಿದರು.

ವ್ಯಸನದಿಂದ ಹೊರಬರಲು ಬಯಸುವವರಿಗೆ ರಾಯಚೂರಿನ ರಿಮ್ಸ್ ಆಸ್ಪತ್ರೆಯ ಬಿ ಬ್ಲಾಕ್‌ನ ಕೊಠಡಿ ಸಂಖ್ಯೆ 27ರಲ್ಲಿ ಆಪ್ತ ಸಮಾಲೋಚನೆ ಸೌಲಭ್ಯ ಕಲ್ಪಿಸಲಾಗಿದೆ. ಅಗತ್ಯ ಮಾರ್ಗದರ್ಶನಕ್ಕಾಗಿ ರಾಷ್ಟ್ರೀಯ ಉಚಿತ ಸಹಾಯವಾಣಿ ಸಂಖ್ಯೆ 14446 ಅನ್ನು ಸಂಪರ್ಕಿಸಬಹುದು ಎಂದು ಮಾಹಿತಿ ನೀಡಲಾಯಿತು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕಚೇರಿಯಿಂದ ಆರಂಭವಾದ ಜಾಗೃತಿ ನಡಿಗೆ ನಗರದ ಪ್ರಮುಖ ರಸ್ತೆ ಹಾಗೂ ವೃತ್ತಗಳ ಮೂಲಕ ಸಾಗಿತು. ನಡಿಗೆಯಲ್ಲಿ ಭಾಗವಹಿಸಿದ್ದ ವೈದ್ಯಕೀಯ ವಿದ್ಯಾರ್ಥಿಗಳು, ಆರೋಗ್ಯ ಸಿಬ್ಬಂದಿ ಹಾಗೂ ವಿವಿಧ ಸಂಘಟನೆಗಳ ಪ್ರತಿನಿಧಿಗಳು ಮಾದಕ ವಸ್ತುಗಳ ವಿರುದ್ಧ ಜಾಗೃತಿ ಸಂದೇಶ ಸಾರಿದರು.

ನಗರದ ತೀನ್ ಕಂದಿಲ್ ವೃತ್ತದಲ್ಲಿ ನವೋದಯ ವೈದ್ಯಕೀಯ ಮಹಾವಿದ್ಯಾಲಯದ ವಿದ್ಯಾರ್ಥಿಗಳು ಮಾದಕ ವಸ್ತುಗಳ ಸೇವನೆಯಿಂದ ಉಂಟಾಗುವ ದುಷ್ಪರಿಣಾಮಗಳನ್ನು ಬಿಂಬಿಸುವ ಬೀದಿ ನಾಟಕ ಪ್ರದರ್ಶಿಸಿ ಸಾರ್ವಜನಿಕರ ಗಮನ ಸೆಳೆದರು. ಬಸ್ ನಿಲ್ದಾಣದಲ್ಲಿಯೂ ಸಾರ್ವಜನಿಕರಿಗೆ ವ್ಯಸನಮುಕ್ತ ಜೀವನದ ಮಹತ್ವವನ್ನು ತಿಳಿಸಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಶು ಗಿರಿ, ರಿಮ್ಸ್ ನಿರ್ದೇಶಕ ಹಾಗೂ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ವಿಜಯಶಂಕರ, ರಿಮ್ಸ್ ವೈದ್ಯಕೀಯ ಕಾಲೇಜಿನ ಪ್ರಾಂಶುಪಾಲ ಡಾ. ರಾಹುಲ್ ಸಿ. ಕೀರ್ತೆ, ನವೋದಯ ವೈದ್ಯಕೀಯ ಮಹಾವಿದ್ಯಾಲಯದ ಪ್ರಾಂಶುಪಾಲ ಡಾ. ಗುರುದತ್ತ ಎಸ್. ಪವಾರ, ಡಾ. ಬಸವರಾಜ ಎಂ ಪಾಟೀಲ, ಎ.ಎಂ.ಇ. ದಂತ ವೈದ್ಯಕೀಯ ಕಾಲೇಜಿನ ಪ್ರಾಂಶುಪಾಲ ಡಾ. ಸೋಮನಾಥ ರೆಡ್ಡಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ನಂದಿತಾ ಎಂ.ಎನ್. ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ವೈದ್ಯರು, ಆರೋಗ್ಯ ಸಿಬ್ಬಂದಿ, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

ಇದೇ ಸಂದರ್ಭದಲ್ಲಿ ನಶೆಮುಕ್ತ ರಾಯಚೂರು ನಿರ್ಮಾಣದ ಪ್ರತಿಜ್ಞಾವಿಧಿ ಸ್ವೀಕರಿಸಲಾಯಿತು. ಮಾದಕ ವಸ್ತುಗಳಿಂದ ದೂರವಿದ್ದು, ಕುಟುಂಬ ಹಾಗೂ ಸಮಾಜದಲ್ಲಿ ವ್ಯಸನದ ವಿರುದ್ಧ ಅರಿವು ಮೂಡಿಸುವ ಮೂಲಕ ಆರೋಗ್ಯಕರ ಮತ್ತು ಸುರಕ್ಷಿತ ಜಿಲ್ಲೆಯ ನಿರ್ಮಾಣಕ್ಕೆ ಶ್ರಮಿಸುವ ಸಂಕಲ್ಪ ಮಾಡಲಾಯಿತು.

ಜನಗಣತಿ ಕಾರ್ಯವನ್ನು ನಿಖರವಾಗಿ, ಪ್ರಾಮಾಣಿಕವಾಗಿ ನಿರ್ವಹಿಸಿ: ಜಿಲ್ಲಾಧಿಕಾರಿ ಪೂವಿತಾ ಎಸ್.

ಅಭ್ಯಾಸದಿಂದ ಕಾರ್ಯನಿರ್ವಹಣೆ ಸುಲಭವಾಗಲಿದೆ. ಜನಗಣತಿ ಸಂದರ್ಭದಲ್ಲಿ ಯಾವುದೇ ಗೊಂದಲಗಳಿಗೆ ಅವಕಾಶ ನೀಡದೆ ಪ್ರತಿಯೊಂದು ಮನೆಯ ಕುಟುಂಬ ಸದಸ್ಯರ ಮಾಹಿತಿಯನ್ನು ಸಮರ್ಪಕವಾಗಿ ಸಂಗ್ರಹಿಸಬೇಕು. ಮಾಹಿತಿ ದಾಖಲಿಸುವಾಗ ತಪ್ಪುಗಳು ಸಂಭವಿಸದಂತೆ ಎಚ್ಚರಿಕೆ ವಹಿಸಬೇಕು ಎಂದು ಸೂಚಿಸಿದರು.

ಜನಗಣತಿಯ ಮೂಲಕ ಸಂಗ್ರಹವಾಗುವ ಅಂಕಿಅಂಶಗಳು ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳು, ಮೂಲಸೌಕರ್ಯಗಳ ನಿರ್ಮಾಣ ಹಾಗೂ ಸಾರ್ವಜನಿಕ ಸೌಲಭ್ಯಗಳ ಕಲ್ಪನೆಗೆ ಆಧಾರವಾಗಲಿವೆ. ಹೀಗಾಗಿ ಈ ಕಾರ್ಯವನ್ನು ಕೇವಲ ಆಡಳಿತಾತ್ಮಕ ಜವಾಬ್ದಾರಿಯೆಂದು ಪರಿಗಣಿಸದೆ ರಾಷ್ಟ್ರದ ಅಭಿವೃದ್ಧಿಗೆ ನೀಡುವ ಮಹತ್ವದ ಕೊಡುಗೆಯೆಂದು ಭಾವಿಸಿ ಕಾರ್ಯನಿರ್ವಹಿಸಬೇಕು ಎಂದು ಹೇಳಿದರು.

ಎರಡು ದಿನಗಳ ತರಬೇತಿ ಕಾರ್ಯಾಗಾರದಲ್ಲಿ ಅಧಿಕಾರಿಗಳು ಮತ್ತು ಸಿಬ್ಬಂದಿ ಜನಗಣತಿಯ ಪ್ರತಿಯೊಂದು ಹಂತದ ಕುರಿತು ಸಮಗ್ರ ಮಾಹಿತಿ ಪಡೆದುಕೊಳ್ಳಬೇಕು. ಯಾವುದೇ ಅನುಮಾನಗಳಿದ್ದಲ್ಲಿ ತರಬೇತುದಾರರಿಂದ ಪರಿಹರಿಸಿಕೊಂಡು ಮುಂದಿನ ದಿನಗಳಲ್ಲಿ ಕ್ಷೇತ್ರಮಟ್ಟದ ಕಾರ್ಯವನ್ನು ಸುಗಮವಾಗಿ ನಿರ್ವಹಿಸಲು ಸಿದ್ಧರಾಗಬೇಕು. ಜನಗಣತಿ ಕಾರ್ಯದಲ್ಲಿ ನಿರ್ಲಕ್ಷ್ಯಕ್ಕೆ ಅವಕಾಶವಿಲ್ಲ ಎಂದು ಎಚ್ಚರಿಸಿದರು.

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ್ ಕಾಂದೂ ಮಾತನಾಡಿ, ಪ್ರತಿ ಹತ್ತು ವರ್ಷಗಳಿಗೊಮ್ಮೆ ನಡೆಯುವ ಜನಗಣತಿಯು ಅಧಿಕಾರಿಗಳು ಮತ್ತು ಸಿಬ್ಬಂದಿಗೆ ವಿಶೇಷ ಅನುಭವ ನೀಡುವ ಮಹತ್ವದ ಕಾರ್ಯವಾಗಿದೆ. ಪ್ರತಿಯೊಬ್ಬರೂ ತಮಗೆ ವಹಿಸಿರುವ ಜವಾಬ್ದಾರಿಯನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕು. ಕಾರ್ಯಾರಂಭಕ್ಕೆ ಇನ್ನೂ ಸಮಯಾವಕಾಶವಿರುವುದರಿಂದ ತಾಂತ್ರಿಕ ಅಥವಾ ಆಡಳಿತಾತ್ಮಕ ಸಮಸ್ಯೆಗಳಿದ್ದರೆ ಜಿಲ್ಲಾಧಿಕಾರಿಗಳ ಅಥವಾ ಜಿಲ್ಲಾ ಪಂಚಾಯಿತಿ ಗಮನಕ್ಕೆ ತಂದು ಪರಿಹರಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಜನಗಣತಿ ನೋಡಲ್ ಅಧಿಕಾರಿಗಳಾದ ಸುದರ್ಶನ್ ಹಾಗೂ ಬೇಗಂ ಅವರು ಜನಗಣತಿ ಪ್ರಕ್ರಿಯೆ, ಡಿಜಿಟಲ್ ಮಾಹಿತಿ ಸಂಗ್ರಹಣೆ ಮತ್ತು ಅಧಿಕಾರಿಗಳು ಅನುಸರಿಸಬೇಕಾದ ಕ್ರಮಗಳ ಕುರಿತು ತರಬೇತಿಯಲ್ಲಿ ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಸೋಮಲಿಂಗ ಗೋಪಾಲ ಗೆಣ್ಣೂರ, ಲಿಂಗಸುಗೂರು ಸಹಾಯಕ ಆಯುಕ್ತ ನಾಗೇಂದ್ರ ಪ್ರಸಾದ್, ಜಿಲ್ಲಾ ಪಂಚಾಯಿತಿ ಮುಖ್ಯ ಯೋಜನಾಧಿಕಾರಿ ಡಾ. ಟಿ. ರೋಣಿ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸವಣ್ಣೆಪ್ಪ ಕಲಶೆಟ್ಟಿ, ಜಿಲ್ಲಾ ಜನಗಣತಿ ತರಬೇತಿ ಅಧಿಕಾರಿ ಸದಾಶಿವಪ್ಪ, ಜಿಲ್ಲೆಯ ವಿವಿಧ ತಾಲೂಕುಗಳ ತಹಶೀಲ್ದಾರರು, ಚಾರ್ಜ್ ಅಧಿಕಾರಿಗಳು ಹಾಗೂ ಸಂಬಂಧಪಟ್ಟ ಇಲಾಖೆಗಳ ಸಿಬ್ಬಂದಿ ಉಪಸ್ಥಿತರಿದ್ದರು.

ಹಿಂದುಳಿದ ವರ್ಗಗಳ ಮೀಸಲಾತಿಯಲ್ಲಿ ಅನ್ಯಾಯ: ಕಾನೂನು ಹೋರಾಟದ ಎಚ್ಚರಿಕೆ

ಸಂಪುಟದಲ್ಲಿ ಚರ್ಚಿಸಿ, ಪರಿಶಿಷ್ಟ ಜಾತಿಗಳಿಗೆ ಶೇ.15, ಪರಿಶಿಷ್ಟ ಪಂಗಡಗಳಿಗೆ ಶೇ.3 ಹಾಗೂ ಇತರ ಹಿಂದುಳಿದ ವರ್ಗಗಳಿಗೆ ಶೇ.32ರಷ್ಟು ಮೀಸಲಾತಿ ಕಲ್ಪಿಸುವ ಕುರಿತು ತೀರ್ಮಾನ ಕೈಗೊಂಡಿತ್ತು. ಒಟ್ಟಾರೆ ಮೀಸಲಾತಿ ಶೇ.50ರ ಮಿತಿಯನ್ನು ಮೀರದಂತೆ ಕ್ರಮ ಕೈಗೊಳ್ಳಲು ನಿರ್ಧರಿಸಲಾಗಿತ್ತು. ಆದರೆ, ಪ್ರಸ್ತುತ ಕ್ಷೇತ್ರವಾರು ಮೀಸಲಾತಿ ನಿಗದಿಯಲ್ಲಿ ಈ ತೀರ್ಮಾನವನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಿಲ್ಲ ಎಂದು ದೂರಿದರು.

ರಾಯಚೂರು ಜಿಲ್ಲಾ ಹಿಂದುಳಿದ ಜಾತಿಗಳ ಒಕ್ಕೂಟದ ನ್ಯಾಯವಾದಿಗಳ ಘಟಕ ಬಿಡುಗಡೆ ಮಾಡಿದ ಅಂಕಿಅಂಶಗಳ ಪ್ರಕಾರ, ಜಿಲ್ಲೆಯ ಜಿಲ್ಲಾ ಪಂಚಾಯಿತಿ ಮತ್ತು ತಾಲೂಕು ಪಂಚಾಯಿತಿ ಕ್ಷೇತ್ರಗಳಲ್ಲಿ ಇತರ ಹಿಂದುಳಿದ ವರ್ಗಗಳಿಗೆ ನಿಗದಿಪಡಿಸಿರುವ ಮೀಸಲಾತಿಯ ಪ್ರಮಾಣವು ನಿರೀಕ್ಷಿತ ಮಟ್ಟಕ್ಕಿಂತ ಕಡಿಮೆಯಾಗಿದೆ. ಜಿಲ್ಲಾ ಪಂಚಾಯಿತಿ ಹಾಗೂ ತಾಲೂಕು ಪಂಚಾಯಿತಿ ಕ್ಷೇತ್ರಗಳ ಮೀಸಲಾತಿ ಹಂಚಿಕೆಯಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಇತರ ಹಿಂದುಳಿದ ವರ್ಗಗಳ ನಡುವೆ ಸಮರ್ಪಕ ಪ್ರಾತಿನಿಧ್ಯ ಕಲ್ಪಿಸಬೇಕೆಂಬುದು ಒಕ್ಕೂಟದ ಪ್ರಮುಖ ಬೇಡಿಕೆಯಾಗಿದೆ.

ಜಿಲ್ಲಾ ಪಂಚಾಯಿತಿ ಮತ್ತು ತಾಲೂಕು ಪಂಚಾಯಿತಿಗಳ ಮೀಸಲಾತಿ ನಿಗದಿ ಕುರಿತು ಸರ್ಕಾರ ಹೊರಡಿಸಿರುವ ಅಧಿಸೂಚನೆಯಲ್ಲಿ ಹಿಂದುಳಿದ ವರ್ಗಗಳಿಗೆ ನ್ಯಾಯಯುತ ಪ್ರಾತಿನಿಧ್ಯ ದೊರೆತಿಲ್ಲ. ಇದರಿಂದ ಗ್ರಾಮೀಣ ಸ್ಥಳೀಯ ಆಡಳಿತ ವ್ಯವಸ್ಥೆಯಲ್ಲಿ ಹಿಂದುಳಿದ ಸಮುದಾಯಗಳ ರಾಜಕೀಯ ಭಾಗವಹಿಸುವಿಕೆಗೆ ಹಿನ್ನಡೆಯಾಗುವ ಆತಂಕ ಎದುರಾಗಿದೆ ಎಂದು ಹೇಳಿದರು.

ಸರ್ಕಾರವು ಸಚಿವ ಸಂಪುಟದಲ್ಲಿ ಕೈಗೊಂಡ ತೀರ್ಮಾನವನ್ನು ಅನುಷ್ಠಾನಗೊಳಿಸದೆ, ಹಿಂದುಳಿದ ವರ್ಗಗಳಿಗೆ ಕಡಿಮೆ ಪ್ರಮಾಣದ ಮೀಸಲಾತಿ ನಿಗದಿಪಡಿಸಿರುವುದು ಸಾಮಾಜಿಕ ನ್ಯಾಯದ ಆಶಯಗಳಿಗೆ ವಿರುದ್ಧವಾಗಿದೆ. ಸಂವಿಧಾನಬದ್ಧವಾಗಿ ದೊರೆಯಬೇಕಾದ ರಾಜಕೀಯ ಪ್ರಾತಿನಿಧ್ಯವನ್ನು ನಿರಾಕರಿಸುವುದು ಹಿಂದುಳಿದ ಸಮುದಾಯಗಳಿಗೆ ಎಸಗುವ ಅನ್ಯಾಯವಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಜಿಲ್ಲಾ ಪಂಚಾಯಿತಿ ಹಾಗೂ ತಾಲೂಕು ಪಂಚಾಯಿತಿ ಚುನಾವಣೆಗಳು ಗ್ರಾಮೀಣಾಭಿವೃದ್ಧಿ ಮತ್ತು ಸ್ಥಳೀಯ ಆಡಳಿತದಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ. ಇಂತಹ ಸಂಸ್ಥೆಗಳಲ್ಲಿ ಎಲ್ಲ ಸಮುದಾಯಗಳಿಗೂ ಸಮಾನ ಅವಕಾಶ ಮತ್ತು ಸೂಕ್ತ ಪ್ರಾತಿನಿಧ್ಯ ದೊರೆಯಬೇಕು. ವಿಶೇಷವಾಗಿ ಸಾಮಾಜಿಕ, ಆರ್ಥಿಕ ಹಾಗೂ ರಾಜಕೀಯವಾಗಿ ಹಿಂದುಳಿದಿರುವ ವರ್ಗಗಳಿಗೆ ಮೀಸಲಾತಿಯ ಮೂಲಕ ಆಡಳಿತದಲ್ಲಿ ಪಾಲ್ಗೊಳ್ಳುವ ಅವಕಾಶ ಕಲ್ಪಿಸುವುದು ಸರ್ಕಾರದ ಜವಾಬ್ದಾರಿಯಾಗಿದೆ ಎಂದು ಪ್ರತಿಪಾದಿಸಿದರು.

ಈ ಹಿನ್ನೆಲೆಯಲ್ಲಿ ಸರ್ಕಾರವು ಪ್ರಸ್ತುತ ಪ್ರಕಟಿಸಿರುವ ಕ್ಷೇತ್ರವಾರು ಮೀಸಲಾತಿ ಪಟ್ಟಿಯನ್ನು ಮರುಪರಿಶೀಲಿಸಿ, ನ್ಯಾಯಮೂರ್ತಿ ಕೆ. ಭಕ್ತವತ್ಸಲ ಆಯೋಗದ ಶಿಫಾರಸಿನಂತೆ ಇತರ ಹಿಂದುಳಿದ ವರ್ಗಗಳಿಗೆ ಶೇ.32ರಷ್ಟು ಮೀಸಲಾತಿ ಕಲ್ಪಿಸಬೇಕು. ಮೀಸಲಾತಿಯಲ್ಲಿನ ವ್ಯತ್ಯಾಸಗಳನ್ನು ಸರಿಪಡಿಸಿದ ನಂತರವೇ ಜಿಲ್ಲಾ ಮತ್ತು ತಾಲೂಕು ಪಂಚಾಯಿತಿ ಚುನಾವಣೆಗಳನ್ನು ನಡೆಸಬೇಕು ಎಂದು ಆಗ್ರಹಿಸಿದರು.

ಸರ್ಕಾರವು ಹಿಂದುಳಿದ ವರ್ಗಗಳ ನ್ಯಾಯಸಮ್ಮತ ಬೇಡಿಕೆಗೆ ಸ್ಪಂದಿಸದಿದ್ದರೆ ಜಿಲ್ಲೆಯ ಹಿಂದುಳಿದ ಸಮುದಾಯಗಳನ್ನು ಸಂಘಟಿಸಿ ಚುನಾವಣಾ ಪ್ರಕ್ರಿಯೆಯನ್ನು ಬಹಿಷ್ಕರಿಸುವುದರ ಜೊತೆಗೆ ಕಾನೂನು ಹೋರಾಟ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ರಾಯಚೂರು ಜಿಲ್ಲಾ ಹಿಂದುಳಿದ ಜಾತಿಗಳ ಒಕ್ಕೂಟದ ನ್ಯಾಯವಾದಿಗಳ ಘಟಕದ ಪ್ರಧಾನ ಕಾರ್ಯದರ್ಶಿ ವಿಜಯಕುಮಾರ ಹೂಗಾರ, ಮುನ್ನಕುಮಾರ, ಶರಣಪ್ಪ, ಬ್ರಹ್ಮ ಗಣೇಶ್, ಪಿ. ಪ್ರಕಾಶ್, ಆರ್. ಆಂಜಿನೇಯ, ಆಂಜಿನೇಯ ಯಾದವ, ಜಂಬೂನಾಥ್ ಯಾದವ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಮೊದಲನೇ ಪುಟದಿಂದ

ಬಸ್ ಪ್ರಯಾಣ ದರ ಏರಿಕೆ ಅನಿವಾರ್ಯ: ಡಿ.ಕೆ. ಶಿವಕುಮಾರ್ ಸಮರ್ಥನೆ

ಸಚಿವ ಸಂಪುಟದ ನಿರ್ಧಾರದಂತೆ ನವೆಂಬರ್ 1ರಿಂದ ನಂದಿನಿ ಹಾಲಿನ ದರವನ್ನು ಪ್ರತಿ ಲೀಟರ್‌ಗೆ ₹8 ಹೆಚ್ಚಿಸಲಾಗಿದ್ದು, ಇದರಲ್ಲಿ ₹7 ರೈತರಿಗೆ ಹಾಗೂ ₹1 ಕರ್ನಾಟಕ ಹಾಲು ಮಹಾಮಂಡಳಿಗೆ (ಕೆಎಂಎಫ್) ಸೇರಲಿದೆ ಎಂದು ವಿವರಿಸಿದರು.

ಕೆಲವು ವಿಧದ ಹಾಲಿನ ದರ ₹12ರವರೆಗೆ ಹಾಗೂ ಮೊಸರಿನ ದರ ₹14ರವರೆಗೆ ಹೆಚ್ಚಳವಾಗಿರುವ ಕುರಿತು ಪ್ರತಿಕ್ರಿಯಿಸಿದ ಅವರು, ಹಾಲಿನಲ್ಲಿರುವ ಕೊಬ್ಬಿನ ಅಂಶ ಮತ್ತು ವಿವಿಧ ವರ್ಗಗಳ ಆಧಾರದಲ್ಲಿ ದರ ವ್ಯತ್ಯಾಸವಾಗುತ್ತದೆ. ಹಸುವಿನ ಹಾಲು, ಎಮ್ಮೆಯ ಹಾಲು ಹಾಗೂ ಇತರ ವಿಧದ ಹಾಲಿಗೆ ಪ್ರತ್ಯೇಕ ದರಗಳಿರುವುದನ್ನು ಗ್ರಾಹಕರು ಅರ್ಥಮಾಡಿಕೊಳ್ಳಬೇಕು ಎಂದು ಹೇಳಿದರು.

ರಾಘವ ಸರೋವರ ಯೋಜನೆಗೆ ಭೂಮಿಪೂಜೆ: 25 ಎಕರೆ ಪ್ರದೇಶದಲ್ಲಿ ಕೃತಕ ಸರೋವರ ನಿರ್ಮಾಣಕ್ಕೆ ಚಾಲನೆ

ಹೆಚ್ಚಿಸುವುದರ ಜೊತೆಗೆ ಪ್ರಕೃತಿಯೊಂದಿಗೆ ಬೆರೆಯುವಂತಹ ವಾತಾವರಣ ನಿರ್ಮಿಸುವ ದೃಷ್ಟಿಯಿಂದ ಈ ಯೋಜನೆ ಮಹತ್ವ ಪಡೆದುಕೊಂಡಿದೆ.

ಸರೋವರದ ಸುತ್ತಮುತ್ತ ಹಸಿರು ಪ್ರದೇಶವನ್ನು ಅಭಿವೃದ್ಧಿಪಡಿಸುವ ಮೂಲಕ ಪರಿಸರ ಜಾಗೃತಿ ಮೂಡಿಸುವುದು ಹಾಗೂ ಸಾರ್ವಜನಿಕರ ಆರೋಗ್ಯ ಮತ್ತು ನೆಮ್ಮದಿಗೆ ಪೂರಕವಾದ ವಾತಾವರಣ ಕಲ್ಪಿಸುವ ಉದ್ದೇಶವನ್ನು ಯೋಜನೆ ಒಳಗೊಂಡಿದೆ.

ಭೂಮಿಪೂಜೆ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಶ್ರೀ ಸುಬುಧೇಂದ್ರ ತೀರ್ಥ ಸ್ವಾಮೀಜಿಯವರು ಯೋಜನೆಗೆ ಆಶೀರ್ವದಿಸಿದರು. ಮಂತ್ರಾಲಯದ ಸೌಂದರ್ಯ ಮತ್ತು ಪರಿಸರವನ್ನು ಮತ್ತಷ್ಟು ಸಮೃದ್ಧಗೊಳಿಸುವ ನಿಟ್ಟಿನಲ್ಲಿ ರಾಘವ ಸರೋವರ ಯೋಜನೆ ಪ್ರಮುಖ ಹೆಜ್ಜೆಯಾಗಲಿದೆ ಎಂಬ ಆಶಯ ವ್ಯಕ್ತವಾಯಿತು.

ಇದೇ ಸಂದರ್ಭದಲ್ಲಿ ಬೆಂಗಳೂರಿನ ಮದನ್ ಪಾಟೀಲ್ ಅವರು ರಾಘವ ಸರೋವರ ಯೋಜನೆಯ ಅಭಿವೃದ್ಧಿಗಾಗಿ ₹25 ಲಕ್ಷ ದೇಣಿಗೆ ನೀಡುವ ಮೂಲಕ ಯೋಜನೆಗೆ ಆರ್ಥಿಕ ನೆರವು ಒದಗಿಸಿದರು.

ಕಾರ್ಯಕ್ರಮದಲ್ಲಿ ಡಾ. ಸಿ.ಎಸ್. ಮಂಜುನಾಥ್ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದರು. ವಿವಿಧ ಕ್ಷೇತ್ರಗಳ ಗಣ್ಯರು, ಹಿತೈಷಿಗಳು ಹಾಗೂ ಶ್ರೀಮಠದ ಭಕ್ತರು ಉಪಸ್ಥಿತರಿದ್ದರು.

ರಾಘವ ಸರೋವರ ಯೋಜನೆ ಪೂರ್ಣಗೊಂಡ ಬಳಿಕ ಮಂತ್ರಾಲಯದ ಧಾರ್ಮಿಕ ಮಹತ್ವದ ಜೊತೆಗೆ ಪರಿಸರ ಸೌಂದರ್ಯವೂ ಹೆಚ್ಚಾಗಲಿದ್ದು, ಕ್ಷೇತ್ರಕ್ಕೆ ಆಗಮಿಸುವ ಭಕ್ತರು ಹಾಗೂ ಪ್ರವಾಸಿಗರಿಗೆ ಪ್ರಕೃತಿಯ ಮಡಿಲಲ್ಲಿ ನೆಮ್ಮದಿಯ ವಾತಾವರಣ ಒದಗಿಸುವ ನಿರೀಕ್ಷೆಯಿದೆ.

ಕುಡಿಯುವ ನೀರಿನ ಸಮಸ್ಯೆ ಎದುರಾಗದಂತೆ ಮುಂಜಾಗ್ರತಾ ಕ್ರಮ ಕೈಗೊಳ್ಳಿ: ಎನ್.ಎಸ್. ಬೋಸರಾಜು

ಸ್ಪಂದಿಸಬೇಕು ಎಂದು ಸೂಚಿಸಿದರು.

ಕುಡಿಯುವ ನೀರಿನ ಸಮಸ್ಯೆ ಪರಿಹರಿಸುವಲ್ಲಿ ನಿರ್ಲಕ್ಷ್ಯ ತೋರುವ ಅಥವಾ ನೆಪಗಳನ್ನು ಹೇಳಿ ಜವಾಬ್ದಾರಿಯಿಂದ ತಪ್ಪಿಸಿಕೊಳ್ಳುವ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮಕ್ಕೆ ಶಿಫಾರಸು ಮಾಡಲಾಗುವುದು. ಅಗತ್ಯವಿದ್ದರೆ ಸೇವೆಯಿಂದ ವಜಾಗೊಳಿಸುವಂತೆ ಶಿಫಾರಸು ಮಾಡಲಾಗುವುದು ಎಂದು ಎಚ್ಚರಿಸಿದರು.

ಶಾಸಕ ಜಿ. ಹಂಪಯ್ಯ ನಾಯಕ ಮಾತನಾಡಿ, ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರತಿಯೊಂದು ಗ್ರಾಮ ಪಂಚಾಯಿತಿಯಿಂದ ಕುಡಿಯುವ ನೀರಿನ ಸ್ಥಿತಿಗತಿ ಕುರಿತು ಪ್ರತಿದಿನ ಮಾಹಿತಿ ಸಂಗ್ರಹಿಸಬೇಕು. ಸಮಸ್ಯೆಗಳಿರುವ ಗ್ರಾಮಗಳಲ್ಲಿ ತಕ್ಷಣ ಪರಿಹಾರ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು.

ಸಭೆಯಲ್ಲಿ ವಿವಿಧ ಗ್ರಾಮ ಪಂಚಾಯಿತಿಗಳ ಪಿಡಿಓಗಳು ತಮ್ಮ ವ್ಯಾಪ್ತಿಯ ಕುಡಿಯುವ ನೀರಿನ ಲಭ್ಯತೆ, ಕೊಳವೆಬಾವಿಗಳ ಸ್ಥಿತಿ ಹಾಗೂ ಮೂಲಸೌಕರ್ಯಗಳ ಕುರಿತು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಅಬ್ದುಲ್ ಗಫೂರ್ ಸಾಬ್, ಪಂಚ ಗ್ಯಾರಂಟಿ ಯೋಜನೆಗಳ ಸಮಿತಿ ಅಧ್ಯಕ್ಷ ಬಿ.ಕೆ. ಅಮರೇಶಪ್ಪ, ತಾಲೂಕು ಪಂಚಾಯಿತಿ ಅಧಿಕಾರಿಗಳು, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

ಜಿಲ್ಲಾ 12ನೇ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಸಕಲ ಸಿದ್ಧತೆ: ಎನ್.ಎಸ್. ಬೋಸರಾಜು

ಮೆರವಣಿಗೆಯಲ್ಲಿ ಭಾಗವಹಿಸಬೇಕು ಎಂದು ಕರೆ ನೀಡಿದರು.

ಸಮ್ಮೇಳನದ ಸ್ವಾಗತ ಸಮಿತಿಯ ಗೌರವಾಧ್ಯಕ್ಷರಾಗಿರುವ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ ಸಚಿವ ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವ ಡಾ. ಅಜಯ್ ಧರ್ಮಸಿಂಗ್ ಅವರು ನವೆಂಬರ್ 14 ಮತ್ತು 15ರಂದು ನಡೆಯಲಿರುವ ಸಮ್ಮೇಳನದಲ್ಲಿ ಭಾಗವಹಿಸಲಿದ್ದಾರೆ. ಜಿಲ್ಲೆಯ ಜನಪ್ರತಿನಿಧಿಗಳು, ವಿವಿಧ ಕ್ಷೇತ್ರಗಳ ಗಣ್ಯರು ಹಾಗೂ ಸಾಹಿತ್ಯಾಸಕ್ತರನ್ನು ಆಹ್ವಾನಿಸಲಾಗಿದೆ ಎಂದು ತಿಳಿಸಿದರು.

ಜಿಲ್ಲೆಯ ಎಲ್ಲ ತಾಲೂಕುಗಳಿಂದ ಹೆಚ್ಚಿನ ಸಂಖ್ಯೆಯಲ್ಲಿ ಜನರು ಆಗಮಿಸಿ ಎರಡು ದಿನಗಳ ಸಾಹಿತ್ಯಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಬೇಕು. ಸಮ್ಮೇಳನದ ಯಶಸ್ಸಿಗೆ ಎಲ್ಲ ಕನ್ನಡಪರ ಸಂಘಟನೆಗಳು, ಶಿಕ್ಷಣ ಸಂಸ್ಥೆಗಳು, ಸಾಹಿತಿಗಳು ಹಾಗೂ ಸಾರ್ವಜನಿಕರು ಸಹಕಾರ ನೀಡಬೇಕು ಎಂದು ಬೋಸರಾಜು ಮನವಿ ಮಾಡಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ರಂಗಣ್ಣ ಪಾಟೀಲ್ ಅಳ್ಳುಂಡಿ ಮಾತನಾಡಿ, ನವೆಂಬರ್ 14ರಂದು ಬೆಳಿಗ್ಗೆ 8 ಗಂಟೆಗೆ ರಾಷ್ಟ್ರಧ್ವಜ, ಪರಿಷತ್ತಿನ ಧ್ವಜ ಹಾಗೂ ಕನ್ನಡ ಧ್ವಜಾರೋಹಣದೊಂದಿಗೆ ಸಮ್ಮೇಳನದ ಕಾರ್ಯಕ್ರಮಗಳಿಗೆ ಚಾಲನೆ ದೊರೆಯಲಿದೆ. ಬೆಳಿಗ್ಗೆ 8.30ಕ್ಕೆ ಮಹಿಳಾ ಸಮಾಜದಿಂದ ರಂಗಮಂದಿರದವರೆಗೆ ಸಮ್ಮೇಳನಾಧ್ಯಕ್ಷರ ಮೆರವಣಿಗೆ ನಡೆಯಲಿದೆ. ಬಳಿಕ ಸಮ್ಮೇಳನದ ಉದ್ಘಾಟನಾ ಸಮಾರಂಭ ಜರುಗಲಿದೆ ಎಂದು ಕಾರ್ಯಕ್ರಮಗಳ ವಿವರ ನೀಡಿದರು.

ಸಮ್ಮೇಳನದ ಸರ್ವಾಧ್ಯಕ್ಷರಾಗಿ ಪ್ರೊ. ಶಾಂತರಸ ಸ್ವಾಮಿ ಮುದ್ದಿನಮಠ ಅವರನ್ನು ಆಯ್ಕೆ ಮಾಡಲಾಗಿದೆ. ಅವರ ಅಧ್ಯಕ್ಷತೆಯಲ್ಲಿ ಎರಡು ದಿನಗಳ ಕಾಲ ಕನ್ನಡ ಭಾಷೆ, ಸಾಹಿತ್ಯ, ಶಿಕ್ಷಣ, ಸಂಸ್ಕೃತಿ, ಸಾಮಾಜಿಕ ಸಮಸ್ಯೆಗಳು ಹಾಗೂ ಜಿಲ್ಲೆಯ ಅಭಿವೃದ್ಧಿಗೆ ಸಂಬಂಧಿಸಿದ ವಿವಿಧ ವಿಷಯಗಳ ಕುರಿತು ಗೋಷ್ಠಿಗಳನ್ನು ಆಯೋಜಿಸಲಾಗಿದೆ ಎಂದು ತಿಳಿಸಿದರು.

ಮೊದಲ ದಿನ ಜಿಲ್ಲಾ ದರ್ಶನ ಗೋಷ್ಠಿಯಲ್ಲಿ ಜಿಲ್ಲೆಯ ಇತಿಹಾಸ, ಸಾಹಿತ್ಯ, ಸಾಂಸ್ಕೃತಿಕ ಪರಂಪರೆ ಹಾಗೂ ವಿವಿಧ ವಿಚಾರಗಳ ಕುರಿತು ಚರ್ಚೆ ನಡೆಯಲಿದೆ. ಶೈಕ್ಷಣಿಕ ವ್ಯವಸ್ಥೆ ಮತ್ತು ಸವಾಲುಗಳು ಗೋಷ್ಠಿಯಲ್ಲಿ ಸರ್ಕಾರಿ ಕನ್ನಡ ಶಾಲೆಗಳು, ಕನ್ನಡಿಗರ ಹೊಣೆಗಾರಿಕೆ, ಕನ್ನಡ ಭಾಷೆ ಮತ್ತು ಸಾಹಿತ್ಯ ಹಾಗೂ ಪ್ರಸ್ತುತ ಶಿಕ್ಷಣ ವ್ಯವಸ್ಥೆಯಲ್ಲಿನ ಸವಾಲುಗಳ ಕುರಿತು ವಿಷಯ ಮಂಡನೆ ನಡೆಯಲಿದೆ ಎಂದರು.

ಮಹಿಳಾ ಸಬಲೀಕರಣದಲ್ಲಿ ಸಾಹಿತ್ಯ ಮತ್ತು ಆಧ್ಯಾತ್ಮಿಕತೆ ಕುರಿತು ವಿಶೇಷ ಉಪನ್ಯಾಸ ಆಯೋಜಿಸಲಾಗಿದೆ. ಮಹಿಳೆಯರ ಸಾಮಾಜಿಕ, ಶೈಕ್ಷಣಿಕ ಹಾಗೂ ಸಾಂಸ್ಕೃತಿಕ ಬೆಳವಣಿಗೆಯಲ್ಲಿ ಸಾಹಿತ್ಯದ ಪಾತ್ರದ ಕುರಿತು ಸಂಪನ್ಮೂಲ ವ್ಯಕ್ತಿಗಳು ವಿಚಾರ ಮಂಡಿಸಲಿದ್ದಾರೆ. ಮಹಿಳಾ ಕವಿಗೋಷ್ಠಿಯಲ್ಲಿ ಜಿಲ್ಲೆಯ ವಿವಿಧ ಭಾಗಗಳ ಮಹಿಳಾ ಕವಯಿತ್ರಿಯರು ತಮ್ಮ ಕವನಗಳನ್ನು ವಾಚಿಸಲಿದ್ದಾರೆ ಎಂದು ವಿವರಿಸಿದರು.

ಸಾಂಸ್ಕೃತಿಕ ಕಾರ್ಯಕ್ರಮಗಳ ಅಂಗವಾಗಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಜಾನಪದ ಕಲೆಗಳ ಪ್ರದರ್ಶನ, ಸಂಗೀತ ಹಾಗೂ ವಿವಿಧ ಕಲಾತಂಡಗಳಿಂದ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಜಿಲ್ಲೆಯ ಕಲಾವಿದರಿಗೆ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಲು ಅವಕಾಶ ಕಲ್ಪಿಸಲಾಗಿದೆ ಎಂದು ಹೇಳಿದರು.

ನವೆಂಬರ್ 15ರಂದು ಬೆಳಿಗ್ಗೆ ಜಿಲ್ಲಾ ದರ್ಶನ ಸೇರಿದಂತೆ ವಿವಿಧ ಸಾಹಿತ್ಯಿಕ ಗೋಷ್ಠಿಗಳು ಮುಂದುವರಿಯಲಿವೆ. ಶೈಕ್ಷಣಿಕ ವ್ಯವಸ್ಥೆ ಮತ್ತು ಸವಾಲುಗಳು, ಸಮಾಜ ಸುಧಾರಣೆ, ಕನ್ನಡ ಸಾಹಿತ್ಯದ ಬೆಳವಣಿಗೆ ಹಾಗೂ ಸಮಕಾಲೀನ ವಿಚಾರಗಳ ಕುರಿತು ಚರ್ಚೆ ನಡೆಯಲಿದೆ. ಜಿಲ್ಲೆಯ ಹಿರಿಯ ಸಾಹಿತಿಗಳು, ಶಿಕ್ಷಣ ತಜ್ಞರು, ಚಿಂತಕರು ಹಾಗೂ ಸಂಪನ್ಮೂಲ ವ್ಯಕ್ತಿಗಳು ಭಾಗವಹಿಸಲಿದ್ದಾರೆ ಎಂದರು.

ಎರಡನೇ ದಿನ ಸಮಕಾಲೀನ ಸಾಹಿತ್ಯಿಕ ವಿಚಾರಗಳ ಕುರಿತು ವಿಶೇಷ ಉಪನ್ಯಾಸ, ಕವಿಗೋಷ್ಠಿ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಜಿಲ್ಲೆಯ ವಿವಿಧ ಭಾಗಗಳ ಕವಿಗಳು, ಬರಹಗಾರರು ಮತ್ತು ಸಾಹಿತ್ಯಾಸಕ್ತರಿಗೆ ಅವಕಾಶ ನೀಡಲಾಗಿದೆ. ಸಮ್ಮೇಳನದ ಸಮಾರೋಪ ಸಮಾರಂಭದಲ್ಲಿ ಗಣ್ಯರು ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

ಕನ್ನಡ ಸಾಹಿತ್ಯ ಪರಿಷತ್ತು ಜಿಲ್ಲೆಯ ಸಾಹಿತ್ಯಿಕ ಚಟುವಟಿಕೆಗಳಿಗೆ ನಿರಂತರ ಪ್ರೋತ್ಸಾಹ ನೀಡುತ್ತಿದ್ದು, ಈ ಸಮ್ಮೇಳನದ ಮೂಲಕ ಯುವಜನರಲ್ಲಿ ಕನ್ನಡ ಭಾಷೆ ಮತ್ತು ಸಾಹಿತ್ಯದ ಬಗ್ಗೆ ಆಸಕ್ತಿ ಮೂಡಿಸುವ ಉದ್ದೇಶ ಹೊಂದಲಾಗಿದೆ. ಕನ್ನಡದ ಶ್ರೀಮಂತ ಪರಂಪರೆಯನ್ನು ಮುಂದಿನ ಪೀಳಿಗೆಗೆ ಪರಿಚಯಿಸುವುದು ಎಲ್ಲರ ಜವಾಬ್ದಾರಿಯಾಗಿದೆ ಎಂದು ರಂಗಣ್ಣ ಪಾಟೀಲ್ ಅಳ್ಳುಂಡಿ ಹೇಳಿದರು.

ಸಮ್ಮೇಳನದ ಯಶಸ್ಸಿಗಾಗಿ ಸ್ವಾಗತ, ವೇದಿಕೆ, ಮೆರವಣಿಗೆ, ಸಾಂಸ್ಕೃತಿಕ ಕಾರ್ಯಕ್ರಮಗಳು, ಸಾಹಿತ್ಯ ಗೋಷ್ಠಿಗಳು ಸೇರಿದಂತೆ ವಿವಿಧ ವಿಭಾಗಗಳಿಗೆ ಸಮಿತಿಗಳನ್ನು ರಚಿಸಲಾಗಿದೆ. ಜಿಲ್ಲೆಯ ಸಾಹಿತಿಗಳು, ಕಲಾವಿದರು, ಕನ್ನಡಪರ ಸಂಘಟನೆಗಳು ಹಾಗೂ ಸಾರ್ವಜನಿಕರ ಸಹಕಾರದೊಂದಿಗೆ ಸಮ್ಮೇಳನವನ್ನು ಯಶಸ್ವಿಯಾಗಿ ನಡೆಸಲು ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಮಾಂತೇಶ ಮಸ್ಕಿ, ಜಯಣ್ಣ, ಕೆ. ಶಾಂತಪ್ಪ, ಬಾಬು ಬಂಡಾರಿಗಲ್, ಅಯ್ಯಪ್ಪ ಹುಡಾ, ಮಂಜುನಾಥ, ತಾಯಪ್ಪ, ವರಪೇಟೆ, ವೀರ ಹನುಮಾನ್, ದಂಡಪ್ಪ ಬಿರಾದಾರ, ರಾವತರಾವ್, ಡಾ. ವಿಜಯ ರಾಜೇಂದ್ರ ಸೇರಿದಂತೆ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಪದಾಧಿಕಾರಿಗಳು, ಸಮ್ಮೇಳನ ಸ್ವಾಗತ ಸಮಿತಿ ಸದಸ್ಯರು ಹಾಗೂ ಕನ್ನಡಪರ ಸಂಘಟನೆಗಳ ಮುಖಂಡರು ಉಪಸ್ಥಿತರಿದ್ದರು.

ಆತಕೂರು ಗ್ರಾಮದಲ್ಲಿ ದೌರ್ಜನ್ಯ ತಡೆ ಜಾಗೃತಿ: ಸಂವಿಧಾನಿಕ ಹಕ್ಕುಗಳು, ಸಾಮಾಜಿಕ ಸಾಮರಸ್ಯಕ್ಕೆ ಒತ್ತು

ರಾಯಚೂರು: ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಸಮುದಾಯದ ಜನರಲ್ಲಿ ಸಂವಿಧಾನಿಕ ಹಕ್ಕುಗಳು, ಸಾಮಾಜಿಕ ಸಮಾನತೆ, ದೌರ್ಜನ್ಯ ತಡೆ ಕಾಯ್ದೆ ಹಾಗೂ ಸರ್ಕಾರದ ವಿವಿಧ ಕಲ್ಯಾಣ ಯೋಜನೆಗಳ ಕುರಿತು ಅರಿವು ಮೂಡಿಸುವ ಉದ್ದೇಶದಿಂದ ತಾಲೂಕಿನ ಆತಕೂರು ಗ್ರಾಮದಲ್ಲಿ ತಾಲೂಕು ಮಟ್ಟದ ದೌರ್ಜನ್ಯ ತಡೆ ಸಮಿತಿ ವತಿಯಿಂದ ವಿಶೇಷ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಶು ಗಿರಿ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ, ತಹಶೀಲ್ದಾರ್, ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಜಿಲ್ಲಾ ಮತ್ತು ತಾಲೂಕು ಮಟ್ಟದ ಅಧಿಕಾರಿಗಳು ಭಾಗವಹಿಸಿ ಗ್ರಾಮಸ್ಥರಿಗೆ ಕಾನೂನು ರಕ್ಷಣೆ, ಸಾಮಾಜಿಕ ನ್ಯಾಯ ಮತ್ತು ಸರ್ಕಾರದ ಸೌಲಭ್ಯಗಳ ಕುರಿತು ಮಾಹಿತಿ ನೀಡಿದರು.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಸಮುದಾಯದ ಜನರಿಗೆ ಸಂವಿಧಾನ ಒದಗಿಸಿರುವ ಸಮಾನತೆ, ಸ್ವಾತಂತ್ರ್ಯ, ಗೌರವಯುತ ಜೀವನ ಹಾಗೂ ಸಾಮಾಜಿಕ ನ್ಯಾಯದ ಹಕ್ಕುಗಳ ಕುರಿತು ಅರಿವು ಮೂಡಿಸಲಾಯಿತು. ಜಾತಿ ಆಧಾರಿತ ತಾರತಮ್ಯ, ಅಸ್ಪೃಶ್ಯತೆ, ಸಾಮಾಜಿಕ ಬಹಿಷ್ಕಾರ ಹಾಗೂ ದೌರ್ಜನ್ಯಗಳು ಕಾನೂನುಬಾಹಿರವಾಗಿದ್ದು, ಇಂತಹ ಘಟನೆಗಳು ಸಂಭವಿಸಿದಲ್ಲಿ ಸಂತ್ರಸ್ತರು ಯಾವುದೇ ಭಯವಿಲ್ಲದೆ ಪೊಲೀಸ್ ಠಾಣೆ ಅಥವಾ ಸಂಬಂಧಪಟ್ಟ ಅಧಿಕಾರಿಗಳಿಗೆ ದೂರು ಸಲ್ಲಿಸಬೇಕು ಎಂದು ತಿಳಿಸಲಾಯಿತು.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಮೇಲಿನ ದೌರ್ಜನ್ಯ ತಡೆ ಕಾಯ್ದೆಯಡಿ ಸಂತ್ರಸ್ತರಿಗೆ ದೊರೆಯುವ ಕಾನೂನು ರಕ್ಷಣೆ, ಪರಿಹಾರ, ಪುನರ್ವಸತಿ ಹಾಗೂ ಇತರ ನೆರವಿನ ಕುರಿತು ವಿವರಿಸಲಾಯಿತು. ದೌರ್ಜನ್ಯ ಪ್ರಕರಣಗಳಲ್ಲಿ ಸಂತ್ರಸ್ತರಿಗೆ ನ್ಯಾಯ ಒದಗಿಸುವುದು









ಮತ್ತು ಅವರ ಹಕ್ಕುಗಳನ್ನು ರಕ್ಷಿಸುವುದು ಸಂಬಂಧಪಟ್ಟ ಇಲಾಖೆಗಳ ಪ್ರಮುಖ ಜವಾಬ್ದಾರಿಯಾಗಿದೆ ಎಂದು ಅಧಿಕಾರಿಗಳು ತಿಳಿಸಿದರು.

ಗ್ರಾಮದಲ್ಲಿನ ಸಾರ್ವಜನಿಕ ರಸ್ತೆಗಳು, ಕುಡಿಯುವ ನೀರಿನ ಮೂಲಗಳು, ದೇವಸ್ಥಾನಗಳು ಹಾಗೂ ಇತರ ಸಾರ್ವಜನಿಕ ಸ್ಥಳಗಳನ್ನು ಜಾತಿ ಭೇದವಿಲ್ಲದೆ ಪ್ರತಿಯೊಬ್ಬರೂ ಬಳಸುವ ಹಕ್ಕು ಹೊಂದಿದ್ದಾರೆ. ದೇವಸ್ಥಾನ ಪ್ರವೇಶಕ್ಕೆ ಅಡ್ಡಿಪಡಿಸುವುದು, ಸಾರ್ವಜನಿಕ ಸೌಲಭ್ಯಗಳ ಬಳಕೆಯನ್ನು ನಿರಾಕರಿಸುವುದು ಹಾಗೂ ಜಾತಿಯ ಆಧಾರದ ಮೇಲೆ ತಾರತಮ್ಯ ಎಸಗುವುದು ಕಾನೂನಿನ ಉಲ್ಲಂಘನೆಯಾಗುತ್ತದೆ ಎಂಬುದನ್ನು ಮನವರಿಕೆ ಮಾಡಿಕೊಡಲಾಯಿತು.

ಇದೇ ಸಂದರ್ಭದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಸಮುದಾಯದ ಶೈಕ್ಷಣಿಕ ಹಾಗೂ ಆರ್ಥಿಕ ಅಭಿವೃದ್ಧಿಗಾಗಿ ಸರ್ಕಾರ ಜಾರಿಗೊಳಿಸಿರುವ ವಿದ್ಯಾರ್ಥಿವೇತನ, ವಸತಿ ಸೌಲಭ್ಯ, ಸ್ವಯಂ ಉದ್ಯೋಗ, ಆರ್ಥಿಕ ನೆರವು ಸೇರಿದಂತೆ ವಿವಿಧ ಕಲ್ಯಾಣ ಯೋಜನೆಗಳ ಕುರಿತು ಮಾಹಿತಿ ನೀಡಲಾಯಿತು. ಅರ್ಹ ಫಲಾನುಭವಿಗಳು ಸಂಬಂಧಪಟ್ಟ ಇಲಾಖೆಗಳ ಮೂಲಕ ಸೌಲಭ್ಯಗಳನ್ನು ಪಡೆದುಕೊಳ್ಳುವಂತೆ ಸಲಹೆ ನೀಡಲಾಯಿತು.

ಗ್ರಾಮೀಣ ಪ್ರದೇಶಗಳಲ್ಲಿ ಶುದ್ಧ ಕುಡಿಯುವ ನೀರು, ರಸ್ತೆ, ಬೀದಿ ದೀಪ, ಚರಂಡಿ, ನೈರ್ಮಲ್ಯ, ಆರೋಗ್ಯ ಹಾಗೂ ಶಿಕ್ಷಣದಂತಹ ಮೂಲಭೂತ ಸೌಲಭ್ಯಗಳು ಎಲ್ಲ ನಾಗರಿಕರಿಗೂ ಸಮಾನವಾಗಿ ದೊರೆಯಬೇಕು. ಈ ನಿಟ್ಟಿನಲ್ಲಿ ಸಂಬಂಧಪಟ್ಟ ಇಲಾಖೆಗಳು ಅಗತ್ಯ ಕ್ರಮ ಕೈಗೊಳ್ಳಬೇಕೆಂಬ ವಿಷಯದ ಕುರಿತು ಜಾಗೃತಿ ಮೂಡಿಸಲಾಯಿತು.

ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಸಮಾನತೆ, ಸ್ವಾತಂತ್ರ್ಯ, ಸಹೋದರತ್ವ ಹಾಗೂ ಸಾಮಾಜಿಕ ನ್ಯಾಯದ ಆಶಯಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಜಾತಿ, ಧರ್ಮ ಮತ್ತು ಸಮುದಾಯಗಳ ನಡುವಿನ ಭೇದಭಾವ ತೊಡೆದುಹಾಕಿ ಪರಸ್ಪರ ಗೌರವ, ಸಹಕಾರ ಹಾಗೂ ಸೌಹಾರ್ದತೆಯಿಂದ ಬದುಕುವ ಮೂಲಕ ಸಾಮರಸ್ಯದ ಸಮಾಜ ನಿರ್ಮಾಣಕ್ಕೆ ಕೈಜೋಡಿಸಬೇಕು ಎಂದು ಕರೆ ನೀಡಲಾಯಿತು.

ಸಾರ್ವಜನಿಕರು ತಮ್ಮ ಹಕ್ಕುಗಳ ಜೊತೆಗೆ ಕರ್ತವ್ಯಗಳ ಬಗ್ಗೆಯೂ ಅರಿವು ಹೊಂದಬೇಕು. ಯಾವುದೇ ರೀತಿಯ ದೌರ್ಜನ್ಯ ಅಥವಾ ಸಾಮಾಜಿಕ ತಾರತಮ್ಯ ಕಂಡುಬಂದಲ್ಲಿ ಮೌನವಾಗಿರದೆ ಕಾನೂನುಬದ್ಧವಾಗಿ ನ್ಯಾಯ ಪಡೆಯಲು ಮುಂದಾಗಬೇಕು ಎಂದು ಅಧಿಕಾರಿಗಳು ತಿಳಿಸಿದರು.

ಈ ಸಂದರ್ಭದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿ ಕೃಷ್ಣ ಶಾವಂತಗೇರಿ, ಪೊಲೀಸ್, ಕಂದಾಯ, ತಾಲೂಕು ಪಂಚಾಯಿತಿ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಸಿಬ್ಬಂದಿ ಮತ್ತು ಆತಕೂರು ಗ್ರಾಮದ ಸಾರ್ವಜನಿಕರು ಉಪಸ್ಥಿತರಿದ್ದರು.

ಕರ್ನಾಟಕದಲ್ಲಿ 1.06 ಕೋಟಿ ಮತದಾರರ ಹೆಸರು ಕೈಬಿಟ್ಟಿರುವ ಆರೋಪ: ಎಸ್‌ಐಆರ್ ರದ್ದತಿಗೆ ಮಾರೆಪ್ಪ ಹರ್ವಿ ಆಗ್ರಹ

ರಾಯಚೂರು, ನ.4: ಕರ್ನಾಟಕದಲ್ಲಿ ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯಡಿ ಒಂದು ಕೋಟಿಗೂ ಅಧಿಕ ಮತದಾರರ ಹೆಸರುಗಳನ್ನು ಪಟ್ಟಿಯಿಂದ ಕೈಬಿಡಲಾಗಿದೆ ಎಂದು ಆರೋಪಿಸಿರುವ ಎಸ್‌ಐಆರ್ ವಿರೋಧಿ ಹೋರಾಟ ಸಮಿತಿಯ ಸಂಚಾಲಕ ಮಾರೆಪ್ಪ ಹರ್ವಿ, ರಾಜ್ಯ ಸರ್ಕಾರವು ಎಸ್‌ಐಆರ್ ಅಂತಿಮ ಪಟ್ಟಿಯನ್ನು ತಿರಸ್ಕರಿಸಿ, ಮುಂಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆಗಳಿಗೆ ಅದನ್ನು ಬಳಸಬಾರದು ಎಂದು ಆಗ್ರಹಿಸಿದರು.

ನಗರದ ಪತ್ರಿಕಾ ಭವನದಲ್ಲಿ ಬುಧವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರ ರಾಜೀನಾಮೆ ಹಾಗೂ ಎಸ್‌ಐಆರ್ ಪ್ರಕ್ರಿಯೆ ರದ್ದತಿಗಾಗಿ ಆರಂಭಿಸಿರುವ ಹೋರಾಟವು ಬೇಡಿಕೆಗಳು ಈಡೇರುವವರೆಗೂ ಮುಂದುವರಿಯಲಿದೆ ಎಂದು ತಿಳಿಸಿದರು.

2025ರ ಮತದಾರರ ಪಟ್ಟಿಗೆ ಹೋಲಿಸಿದರೆ ಎಸ್‌ಐಆರ್ ಅಂತಿಮ ಪಟ್ಟಿಯಲ್ಲಿ ಸುಮಾರು 6.5 ಲಕ್ಷ ಹೊಸ ಮತದಾರರು ಸೇರ್ಪಡೆಯಾಗಿದ್ದರೆ, 1.06 ಕೋಟಿ ಮತದಾರರ ಹೆಸರುಗಳನ್ನು ಕೈಬಿಡಲಾಗಿದೆ. ಮೃತಪಟ್ಟವರು ಹಾಗೂ ಒಂದಕ್ಕಿಂತ ಹೆಚ್ಚು ಮತದಾರರ ಗುರುತಿನ ಚೀಟಿ ಹೊಂದಿರುವವರ ಸಂಖ್ಯೆ ಸುಮಾರು 25 ಲಕ್ಷ ಎಂದು ಚುನಾವಣಾ ಆಯೋಗವೇ ತಿಳಿಸಿದೆ. ಹಾಗಾದರೆ ಉಳಿದ ಸುಮಾರು 75 ಲಕ್ಷ ಮತದಾರರ ಹೆಸರುಗಳನ್ನು ಯಾವ ಆಧಾರದ ಮೇಲೆ ಕೈಬಿಡಲಾಗಿದೆ ಎಂಬುದಕ್ಕೆ ಸ್ಪಷ್ಟನೆ ನೀಡಬೇಕು ಎಂದು ಒತ್ತಾಯಿಸಿದರು.

ಬೆಂಗಳೂರಿನಲ್ಲಿ ಶೇ.43ರಷ್ಟು ಮತದಾರರ ಹೆಸರುಗಳನ್ನು ಪಟ್ಟಿಯಿಂದ ಕೈಬಿಟ್ಟಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ನಾಗರಿಕ ಮತ ಕಾವಲು ಸಮಿತಿಯು ರಾಜ್ಯದ ವಿವಿಧೆಡೆ ನಡೆಸಿದ ಮತಗಟ್ಟೆಮಟ್ಟದ ಪರಿಶೀಲನೆಯಲ್ಲಿ,



ತಮ್ಮ ವಿಳಾಸದಲ್ಲೇ ವಾಸಿಸುತ್ತಿರುವವರನ್ನು ಸ್ಥಳಾಂತರಗೊಂಡಿದ್ದಾರೆಂದು ಹಾಗೂ ಜೀವಂತವಾಗಿರುವ ಕೆಲವರನ್ನು ಮೃತಪಟ್ಟಿದ್ದಾರೆಂದು ದಾಖಲಿಸಿ ಮತದಾರರ ಪಟ್ಟಿಯಿಂದ ಕೈಬಿಟ್ಟಿರುವ ಪ್ರಕರಣಗಳು ಬೆಳಕಿಗೆ ಬಂದಿವೆ ಎಂದು ಆರೋಪಿಸಿದರು.

ದೇಶಾದ್ಯಂತ ಎಸ್‌ಐಆರ್ ವಿರುದ್ಧ ವಿರೋಧ ಪಕ್ಷಗಳು ಹೋರಾಟ ನಡೆಸುತ್ತಿರುವ ಸಂದರ್ಭದಲ್ಲಿ ಕರ್ನಾಟಕದ ಕಾಂಗ್ರೆಸ್ ಸರ್ಕಾರದ ಕೆಲವು ಸಚಿವರು ಈ ಪ್ರಕ್ರಿಯೆಯನ್ನು ಸಮರ್ಥಿಸುವ ರೀತಿಯಲ್ಲಿ ಮಾತನಾಡುತ್ತಿರುವುದು ವಿಷಾದನೀಯ. ತಮ್ಮ ಜಿಲ್ಲೆ ಅಥವಾ ಕ್ಷೇತ್ರದಲ್ಲಿ ಯಾವುದೇ ಸಮಸ್ಯೆಯಿಲ್ಲ ಎಂಬ ಹೇಳಿಕೆಗಳು ಸರಿಯಲ್ಲ. ಈ ದ್ವಂದ್ವ ನಿಲುವಿನ ಕುರಿತು ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಕಾಂಗ್ರೆಸ್ ರಾಜ್ಯಾಧ್ಯಕ್ಷರು ಸ್ಪಷ್ಟನೆ ನೀಡಬೇಕು ಎಂದು ಆಗ್ರಹಿಸಿದರು.

ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರ ರಾಜೀನಾಮೆ ಹಾಗೂ ಎಸ್ ಐಆರ್ ರದ್ದತಿಗೆ ಒತ್ತಾಯಿಸಿ ಇಂಡಿಯಾ ಒಕ್ಕೂಟದ ರಾಜಕೀಯ ಪಕ್ಷಗಳು ನವೆಂಬರ್ 5ರಂದು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಹಮ್ಮಿಕೊಂಡಿರುವ ಪ್ರತಿಭಟನೆಗೆ ಎಸ್‌ಐಆರ್ ವಿರೋಧಿ ಹೋರಾಟ ಸಮಿತಿ ಸಂಪೂರ್ಣ ಬೆಂಬಲ ನೀಡಲಿದೆ. ಪ್ರಜಾಪ್ರಭುತ್ವ ಮತ್ತು ಮತದಾರರ ಹಕ್ಕುಗಳ ರಕ್ಷಣೆಗಾಗಿ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪ್ರತಿಭಟನೆಯಲ್ಲಿ ಭಾಗವಹಿಸಬೇಕು ಎಂದು ಮನವಿ ಮಾಡಿದರು.

ಮುಂಬರುವ ಗ್ರಾಮ ಪಂಚಾಯಿತಿ, ತಾಲೂಕು ಪಂಚಾಯಿತಿ ಹಾಗೂ ಜಿಲ್ಲಾ ಪಂಚಾಯಿತಿ ಸೇರಿದಂತೆ ಸ್ಥಳೀಯ ಸಂಸ್ಥೆಗಳ ಚುನಾವಣೆಗಳಿಗೆ ಎಸ್‌ಐಆರ್ ಪಟ್ಟಿಯನ್ನು ಬಳಸಬಾರದು. ಬದಲಾಗಿ ರಾಜ್ಯ ಚುನಾವಣಾ ಆಯೋಗದ ಮೂಲಕ ಪ್ರತಿಯೊಂದು ಮತಗಟ್ಟೆ ವ್ಯಾಪ್ತಿಯಲ್ಲಿ ಸಾರ್ವಜನಿಕ ಪರಿಶೀಲನಾ ಸಭೆಗಳನ್ನು ನಡೆಸಿ, 2025ರ ಮತದಾರರ ಪಟ್ಟಿಯನ್ನು ಪರಿಷ್ಕರಿಸಿ ಬಳಸಬೇಕು. ಅರ್ಹ ಮತದಾರರ ಹೆಸರುಗಳನ್ನು ಪಟ್ಟಿಯಿಂದ ಕೈಬಿಡದಂತೆ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಮತದಾನದ ಹಕ್ಕು ಪ್ರಜಾಪ್ರಭುತ್ವದ ಮೂಲಾಧಾರವಾಗಿದ್ದು, ಅರ್ಹ ಮತದಾರರಿಗೆ ಅನ್ಯಾಯವಾಗುವುದನ್ನು ಸಹಿಸುವುದಿಲ್ಲ. ಎಸ್‌ಐಆರ್ ಪ್ರಕ್ರಿಯೆಯನ್ನು ರದ್ದುಗೊಳಿಸುವವರೆಗೂ ಹೋರಾಟ ಮುಂದುವರಿಯಲಿದೆ ಎಂದು ಮಾರೆಪ್ಪ ಹರ್ವಿ ಎಚ್ಚರಿಸಿದರು.

ಈ ಸಂದರ್ಭದಲ್ಲಿ ಚಾಮರಾಜ ಮಾಲಿಪಾಟೀಲ್, ಎಂ.ಆರ್. ಬೇರಿ, ಖಾಜಾ ಅಸ್ಲಾಂ ಅಹಮದ್, ಬಸವರಾಜ್, ಶಾಂತಕುಮಾರ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಕಾಂಗ್ರೆಸ್ ನಾಯಕರ ವಿರುದ್ಧ ಅವಹೇಳನಕಾರಿ ಹೇಳಿಕೆ: ಬಿಜೆಪಿ ನಾಯಕರ ಕ್ಷಮೆಯಾಚನೆಗೆ ಮಾಳೇಶ ಬೊಮ್ಮನಾಳ ಆಗ್ರಹ

ರಾಯಚೂರು, ನ.4: ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹಾಗೂ ವಿಧಾನ ಪರಿಷತ್ ಪ್ರತಿಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು ಕಾಂಗ್ರೆಸ್ ನಾಯಕರ ವಿರುದ್ಧ ಅವಹೇಳನಕಾರಿ ಹಾಗೂ ಪ್ರಚೋದನಾತ್ಮಕ ಹೇಳಿಕೆಗಳನ್ನು ನೀಡುತ್ತಿರುವುದು ಖಂಡನೀಯ. ಜವಾಬ್ದಾರಿಯುತ ಸ್ಥಾನದಲ್ಲಿರುವ ನಾಯಕರು ಸಾರ್ವಜನಿಕವಾಗಿ ಮಾತನಾಡುವಾಗ ಸಂಯಮ ಮತ್ತು ಎಚ್ಚರಿಕೆ ವಹಿಸಬೇಕು ಎಂದು ಕೆಪಿಸಿಸಿ ಪರಿಶಿಷ್ಟ ಜಾತಿಗಳ ವಿಭಾಗದ ಮಾಧ್ಯಮ ವಕ್ತಾರ ಮಾಳೇಶ ಬೊಮ್ಮನಾಳ ಆಗ್ರಹಿಸಿದರು.

ನಗರದ ಪತ್ರಿಕಾ ಭವನದಲ್ಲಿ ಬುಧವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜಕೀಯ ಭಿನ್ನಾಭಿಪ್ರಾಯಗಳಿದ್ದರೂ ಪರಸ್ಪರ ಗೌರವ ಕಾಪಾಡಿಕೊಳ್ಳುವುದು ಪ್ರತಿಯೊಬ್ಬ ಜನಪ್ರತಿನಿಧಿಯ ಕರ್ತವ್ಯವಾಗಿದೆ. ಆದರೆ ಬಿಜೆಪಿ ನಾಯಕರು ರಾಜಕೀಯ ಟೀಕೆಯ ಹೆಸರಿನಲ್ಲಿ ವೈಯಕ್ತಿಕ ನಿಂದನೆಗೆ ಮುಂದಾಗಿರುವುದು ಸರಿಯಲ್ಲ. ಕಾಂಗ್ರೆಸ್ ನಾಯಕರ ವಿರುದ್ಧ ಬಳಸಿರುವ ಅವಹೇಳನಕಾರಿ ಪದಗಳನ್ನು ಹಿಂಪಡೆದು ಸಾರ್ವಜನಿಕವಾಗಿ ಕ್ಷಮೆಯಾಚಿಸಬೇಕು ಎಂದು ಒತ್ತಾಯಿಸಿದರು.

ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಅವರು



ಕಾಂಗ್ರೆಸ್ ನಾಯಕರ ವಿರುದ್ಧ ಆಕ್ಷೇಪಾರ್ಹ ಪದಗಳನ್ನು ಬಳಸುತ್ತಿದ್ದಾರೆ. ಕಮಿಷನ್ ವ್ಯವಹಾರಕ್ಕೆ ಸಂಬಂಧಿಸಿದ ಆರೋಪಗಳನ್ನು ಎದುರಿಸುತ್ತಿರುವ ವಿಜಯೇಂದ್ರ ಅವರಿಗೆ ಕಾಂಗ್ರೆಸ್ ನಾಯಕರ ನೈತಿಕತೆ ಪ್ರಶ್ನಿಸುವ ಅರ್ಹತೆಯಿಲ್ಲ ಎಂದು ಟೀಕಿಸಿದರು.

ವಿಧಾನ ಪರಿಷತ್ ಪ್ರತಿಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು ಕಾಂಗ್ರೆಸ್ ನಾಯಕರನ್ನು ಜನರು ತುಂಡು ತುಂಡಾಗಿ ಕತ್ತರಿಸಿ ಅರಬ್ಬಿ ಸಮುದ್ರಕ್ಕೆ ಎಸೆಯುತ್ತಾರೆ ಎಂಬರ್ಥದಲ್ಲಿ ಹೇಳಿಕೆ ನೀಡಿರುವುದು ಅತ್ಯಂತ ಗಂಭೀರ ವಿಚಾರವಾಗಿದೆ. ಇಂತಹ ಮಾತುಗಳು ಸಮಾಜದಲ್ಲಿ ದ್ವೇಷ ಮತ್ತು ವೈಷಮ್ಯಕ್ಕೆ ಕಾರಣವಾಗುವ ಸಾಧ್ಯತೆಯಿದ್ದು, ಪ್ರಚೋದನಾತ್ಮಕ ಹೇಳಿಕೆ ನೀಡುವವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ವಿಜಯೇಂದ್ರ ಅವರ ಹೇಳಿಕೆ ವಿರುದ್ಧ ಗಬ್ಬೂರು ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಲು ತೆರಳಿದಾಗ ಸುಮಾರು ಆರು ಗಂಟೆಗಳ ಕಾಲ ಕಾಯಿಸಿದರೂ ಎಫ್‌ಐಆರ್ ದಾಖಲಿಸದೆ ಕೇವಲ ದೂರು ಸ್ವೀಕೃತಿಯ ಹಿಂಬರಹ ನೀಡಿ ಕಳುಹಿಸಲಾಗಿದೆ ಎಂದು ಆರೋಪಿಸಿದರು. ಈ ಮೂಲಕ ಪೊಲೀಸರು ದೂರುದಾರರಿಗೆ ನ್ಯಾಯ ಒದಗಿಸುವಲ್ಲಿ ನಿರ್ಲಕ್ಷ್ಯ ತೋರಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ದೂರು ದಾಖಲಿಸಿಕೊಳ್ಳುವಲ್ಲಿ ವಿಫಲರಾಗಿರುವ ಗಬ್ಬೂರು ಪೊಲೀಸ್ ಠಾಣೆಯ ಪಿಎಸ್‌ಐ ಅವರನ್ನು ಸೇವೆಯಿಂದ ವಜಾಗೊಳಿಸಬೇಕು. ಅಲ್ಲದೆ, ಜಿಲ್ಲೆಯಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವಲ್ಲಿ ವಿಫಲರಾಗಿದ್ದಾರೆ ಎಂದು ಆರೋಪಿಸಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಯನ್ನು ಕೂಡಲೇ ವರ್ಗಾವಣೆ ಮಾಡಬೇಕು ಎಂದು ಒತ್ತಾಯಿಸಿದರು.

ರಾಜಕೀಯ ನಾಯಕರು ತಮ್ಮ ಮಾತು ಮತ್ತು ನಡವಳಿಕೆಯಿಂದ ಸಮಾಜಕ್ಕೆ ಮಾದರಿಯಾಗಬೇಕು. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಟೀಕೆ ಮತ್ತು ಭಿನ್ನಾಭಿಪ್ರಾಯಗಳಿಗೆ ಅವಕಾಶವಿದ್ದರೂ ಅವಹೇಳನಕಾರಿ ಭಾಷೆ ಹಾಗೂ ಪ್ರಚೋದನಾತ್ಮಕ ಹೇಳಿಕೆಗಳಿಗೆ ಅವಕಾಶ ನೀಡಬಾರದು ಎಂದು ಮಾಳೇಶ ಬೊಮ್ಮನಾಳ ಹೇಳಿದರು.

ಈ ಸಂದರ್ಭದಲ್ಲಿ ಪಿಎಲ್‌ಡಿಬಿ ನಿರ್ದೇಶಕ ರಾಜಶೇಖರ ಪಾಟೀಲ್, ಮುಖಂಡ ಗಿರಿಯಪ್ಪ ಉಪಸ್ಥಿತರಿದ್ದರು.

ಸರ್ಕಾರಿ ಕನ್ಯಾ ಪ್ರೌಢಶಾಲೆಯಲ್ಲಿ ಮೂರು ತಿಂಗಳ ಉಚಿತ ಟ್ಯೂಷನ್ ತರಗತಿಗೆ ಚಾಲನೆ

ಜಾಲಹಳ್ಳಿ, ನ. 3: ಗ್ರಾಮೀಣ ಭಾಗದ ವಿದ್ಯಾರ್ಥಿನಿಯರ ಶೈಕ್ಷಣಿಕ ಪ್ರಗತಿಗೆ ಉತ್ತೇಜನ ನೀಡುವ ಹಾಗೂ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಉತ್ತಮ ಫಲಿತಾಂಶ ಸಾಧಿಸಲು ನೆರವಾಗುವ ಉದ್ದೇಶದಿಂದ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಮಹಿಳಾ ಜ್ಞಾನವಿಕಾಸ ಕಾರ್ಯಕ್ರಮದಡಿ ಜಾಲಹಳ್ಳಿಯ ಸರ್ಕಾರಿ ಕನ್ಯಾ ಪ್ರೌಢಶಾಲೆಯ 10ನೇ ತರಗತಿ ವಿದ್ಯಾರ್ಥಿನಿಯರಿಗೆ ಮೂರು ತಿಂಗಳ ಉಚಿತ ಟ್ಯೂಷನ್ ತರಗತಿಗಳನ್ನು ಆರಂಭಿಸಲಾಯಿತು.

ಜಾಲಹಳ್ಳಿ ವಲಯದ ಜಾಲಹಳ್ಳಿ ಕಾರ್ಯಕ್ಷೇತ್ರದಲ್ಲಿ ಆಯೋಜಿಸಿದ್ದ ಉಚಿತ ಟ್ಯೂಷನ್ ತರಗತಿಗಳ ಉದ್ಘಾಟನಾ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಲೆಯ ಮುಖ್ಯೋಪಾಧ್ಯಾಯ ಗೋವಿಂದ ವಹಿಸಿದ್ದರು. ಜಿಲ್ಲಾ ಜನಜಾಗೃತಿ ವೇದಿಕೆ ಸದಸ್ಯ ಶರಣಪ್ಪ ಮುಖ್ಯ ಅತಿಥಿಯಾಗಿ ಭಾಗವಹಿಸಿ, ವಿದ್ಯಾರ್ಥಿನಿಯರಿಗೆ ಶೈಕ್ಷಣಿಕ ಮಾರ್ಗದರ್ಶನ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶರಣಪ್ಪ, ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯು ಗ್ರಾಮೀಣ ಪ್ರದೇಶದ ಜನರ ಆರ್ಥಿಕ ಹಾಗೂ ಸಾಮಾಜಿಕ ಅಭಿವೃದ್ಧಿಯೊಂದಿಗೆ ಶಿಕ್ಷಣಕ್ಕೂ ಹೆಚ್ಚಿನ ಆದ್ಯತೆ ನೀಡುತ್ತಿದೆ. ವಿಶೇಷವಾಗಿ ಮಹಿಳಾ ಜ್ಞಾನವಿಕಾಸ ಕಾರ್ಯಕ್ರಮದ ಮೂಲಕ ಮಹಿಳೆಯರ ಸಬಲೀಕರಣ, ಶಿಕ್ಷಣ, ಆರೋಗ್ಯ ಹಾಗೂ ಸ್ವಾವಲಂಬನೆಗೆ ಪೂರಕವಾದ ಹಲವು ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ ಎಂದು



ತಿಳಿಸಿದರು.

ಗ್ರಾಮೀಣ ಭಾಗದ ವಿದ್ಯಾರ್ಥಿನಿಯರು ಶೈಕ್ಷಣಿಕವಾಗಿ ಹಿಂದುಳಿಯದಂತೆ ಪ್ರೋತ್ಸಾಹಿಸುವ ಉದ್ದೇಶದಿಂದ ಮೂರು ತಿಂಗಳ ಕಾಲ ಉಚಿತ ಟ್ಯೂಷನ್ ತರಗತಿಗಳನ್ನು ಆಯೋಜಿಸಲಾಗಿದೆ. ವಿದ್ಯಾರ್ಥಿನಿಯರು ಈ ಅವಕಾಶವನ್ನು ಸಮರ್ಪಕವಾಗಿ ಬಳಸಿಕೊಂಡು ಪರೀಕ್ಷೆಗೆ ಉತ್ತಮ ರೀತಿಯಲ್ಲಿ ಸಿದ್ಧತೆ ನಡೆಸಬೇಕು. ನಿರಂತರ ಅಧ್ಯಯನ, ಶಿಸ್ತು ಹಾಗೂ ಪರಿಶ್ರಮದಿಂದ ಉತ್ತಮ ಅಂಕಗಳನ್ನು ಗಳಿಸಿ ಶಾಲೆ ಮತ್ತು ಪಾಲಕರಿಗೆ ಕೀರ್ತಿ ತರಬೇಕು ಎಂದು ಸಲಹೆ ನೀಡಿದರು.

ಇದೇ ಸಂದರ್ಭದಲ್ಲಿ ಉನ್ನತ ಹಾಗೂ ವೃತ್ತಿಪರ ಶಿಕ್ಷಣ ಮುಂದುವರಿಸಲು ಬಯಸುವ ವಿದ್ಯಾರ್ಥಿಗಳಿಗೆ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಡಿ ಲಭ್ಯವಿರುವ ಸುಜ್ಞಾನ ನಿಧಿ ಶಿಷ್ಯವೇತನದ ಕುರಿತು ಮಾಹಿತಿ ನೀಡಲಾಯಿತು. ಅರ್ಹ ವಿದ್ಯಾರ್ಥಿಗಳು ಶಿಷ್ಯವೇತನದ ಸೌಲಭ್ಯವನ್ನು ಪಡೆದುಕೊಂಡು ತಮ್ಮ ಶೈಕ್ಷಣಿಕ ಗುರಿಗಳನ್ನು ಸಾಧಿಸಬೇಕು ಎಂದು ತಿಳಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮುಖ್ಯೋಪಾಧ್ಯಾಯ ಗೋವಿಂದ ಮಾತನಾಡಿ, ವಿದ್ಯಾರ್ಥಿನಿಯರ ಶೈಕ್ಷಣಿಕ ಹಿತದೃಷ್ಟಿಯಿಂದ ಸರ್ಕಾರಿ ಕನ್ಯಾ ಪ್ರೌಢಶಾಲೆಯನ್ನು ಉಚಿತ ಟ್ಯೂಷನ್ ತರಗತಿಗಳಿಗೆ ಆಯ್ಕೆ ಮಾಡಿರುವುದು ಸಂತಸದ ವಿಷಯವಾಗಿದೆ. ಈ ಉಪಕ್ರಮವು ವಿದ್ಯಾರ್ಥಿನಿಯರ ಕಲಿಕಾ ಸಾಮರ್ಥ್ಯ ಹೆಚ್ಚಿಸಲು ಹಾಗೂ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಉತ್ತಮ ಫಲಿತಾಂಶ ಸಾಧಿಸಲು ಸಹಕಾರಿಯಾಗಲಿದೆ ಎಂದು ಅಭಿಪ್ರಾಯಪಟ್ಟರು.

ವಿದ್ಯಾರ್ಥಿನಿಯರ ಭವಿಷ್ಯ ರೂಪಿಸುವ ನಿಟ್ಟಿನಲ್ಲಿ ಇಂತಹ ಶೈಕ್ಷಣಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿರುವ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಪದಾಧಿಕಾರಿಗಳಿಗೆ ಕೃತಜ್ಞತೆ ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ಮಾಜಿ ಗ್ರಾಮ ಪಂಚಾಯಿತಿ ಸದಸ್ಯ ಶಂಕರಗೌಡ, ಶಾಲೆಯ ಸಹ ಶಿಕ್ಷಕರು, ಯೋಜನೆಯ ವಲಯ ಮೇಲ್ವಿಚಾರಕರು, ಜ್ಞಾನವಿಕಾಸ ಸಮನ್ವಯಾಧಿಕಾರಿ ಹಾಗೂ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು. ಸೇವಾ ಪ್ರತಿನಿಧಿ ಯಲ್ಲಪ್ಪ ಕಾರ್ಯಕ್ರಮ ನಿರೂಪಿಸಿದರು.

ದೇವದುರ್ಗದಲ್ಲಿ ಸಂಭ್ರಮದಿಂದ ಜರುಗಿದ ಆರ್‌ಎಸ್‌ಎಸ್ ಪಥಸಂಚಲನ

ದೇವದುರ್ಗ, ನ. 3: ವಿಜಯದಶಮಿ ಅಂಗವಾಗಿ ರಾಷ್ಟ್ರೀಯ ಸ್ವಯಂಸೇವಕ ಸಂಘದ (ಆರ್‌ಎಸ್‌ಎಸ್) 101ನೇ ವರ್ಷದ ಪಥಸಂಚಲನವು ಮಂಗಳವಾರ ಪಟ್ಟಣದಲ್ಲಿ ಶಿಸ್ತುಬದ್ಧವಾಗಿ ಹಾಗೂ ಸಂಭ್ರಮದಿಂದ ಜರುಗಿತು. ಸಂಘದ ಸ್ವಯಂಸೇವಕರು ಸಾಂಪ್ರದಾಯಿಕ ಗಣವೇಷ ಧರಿಸಿ ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ಪಥಸಂಚಲನ ನಡೆಸಿದರು.

ಪಥಸಂಚಲನದ ಹಿನ್ನೆಲೆಯಲ್ಲಿ ಪಟ್ಟಣದ ಪ್ರಮುಖ ಬೀದಿಗಳು ಹಾಗೂ ಗಲ್ಲಿಗಳಲ್ಲಿ ಹಬ್ಬದ ವಾತಾವರಣ ನಿರ್ಮಾಣವಾಗಿತ್ತು. ಮಹಿಳೆಯರು ಮತ್ತು ಯುವತಿಯರು ರಸ್ತೆಗಳಲ್ಲಿ ಬಣ್ಣಬಣ್ಣದ ಆಕರ್ಷಕ ರಂಗೋಲಿಗಳನ್ನು ಬಿಡಿಸಿ ಸ್ವಯಂಸೇವಕರನ್ನು ಸ್ವಾಗತಿಸಿದರು. ರಸ್ತೆಯ ಇಕ್ಕೆಲಗಳಲ್ಲಿ ನಿಂತಿದ್ದ ಸಾರ್ವಜನಿಕರು ಪುಷ್ಪವೃಷ್ಟಿ ಮಾಡುವ ಮೂಲಕ ಪಥಸಂಚಲನಕ್ಕೆ ಗೌರವ ಸಲ್ಲಿಸಿದರು. ಸ್ವಯಂಸೇವಕರ ಶಿಸ್ತುಬದ್ಧ ಹೆಜ್ಜೆಗಳು ಹಾಗೂ ಸಾರ್ವಜನಿಕರ ಉತ್ಸಾಹ ಕಾರ್ಯಕ್ರಮಕ್ಕೆ ವಿಶೇಷ ಮೆರುಗು ನೀಡಿದವು.

ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದ ಪರಮಪೂಜ್ಯ ಶಿವಾಚಾರ್ಯ ಗುರುಬಸವ ರಾಜಗುರುಗಳು ಮಾತನಾಡಿ, ರಾಷ್ಟ್ರೀಯ ಸ್ವಯಂಸೇವಕ ಸಂಘವು ಸುದೀರ್ಘ ಇತಿಹಾಸ ಹಾಗೂ ವಿಶಿಷ್ಟ ಪರಂಪರೆಯನ್ನು ಹೊಂದಿರುವ ವಿಶ್ವದ ಅತಿದೊಡ್ಡ ಸಂಘಟನೆಗಳಲ್ಲಿ ಒಂದಾಗಿದೆ. ದೇಶದ ಸಂಸ್ಕೃತಿ, ಪರಂಪರೆ ಹಾಗೂ ರಾಷ್ಟ್ರೀಯತೆಯ ಸಂರಕ್ಷಣೆಯ ಉದ್ದೇಶದಿಂದ ಸಂಘವು ನಿರಂತರವಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ಹೇಳಿದರು.

ಭಾರತವು ಸಾವಿರಾರು ವರ್ಷಗಳ



ಸಾಂಸ್ಕೃತಿಕ ಪರಂಪರೆಯನ್ನು ಹೊಂದಿರುವ ದೇಶವಾಗಿದೆ. ಮೊಘಲರು, ಡಚ್ಚರು, ಪೋರ್ಚುಗೀಸರು ಸೇರಿದಂತೆ ವಿವಿಧ ವಿದೇಶಿ ಶಕ್ತಿಗಳ ಆಕ್ರಮಣಗಳನ್ನು ಎದುರಿಸಿದರೂ ಭಾರತೀಯ ಸಂಸ್ಕೃತಿ ತನ್ನ ಮೂಲ ಸ್ವರೂಪ ಹಾಗೂ ಅಸ್ಮಿತೆಯನ್ನು ಉಳಿಸಿಕೊಂಡು ಬಂದಿದೆ. ದೇಶದ ಸಾಂಸ್ಕೃತಿಕ ಮೌಲ್ಯಗಳನ್ನು ಸಂರಕ್ಷಿಸಿ ಮುಂದಿನ ಪೀಳಿಗೆಗೆ ಪರಿಚಯಿಸುವ ಜವಾಬ್ದಾರಿ ಪ್ರತಿಯೊಬ್ಬ ನಾಗರಿಕರ ಮೇಲಿದೆ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದ ಮುಖ್ಯ ವಕ್ತಾರ ಪ್ರಹ್ಲಾದ ಕೆಂಗಲ್ ಮಾತನಾಡಿ, ಭಾರತದ ಸನಾತನ ಸಂಸ್ಕೃತಿ, ವೈವಿಧ್ಯಮಯ ಆಚರಣೆಗಳು ಹಾಗೂ ಪರಂಪರೆಗಳು ದೇಶದ ವೈಶಿಷ್ಟ್ಯವನ್ನು ಪ್ರತಿಬಿಂಬಿಸುತ್ತವೆ. ಇಂತಹ ಮೌಲ್ಯಗಳನ್ನು ಯುವಪೀಳಿಗೆಗೆ ಪರಿಚಯಿಸುವ ಮೂಲಕ ದೇಶದ ಸಾಂಸ್ಕೃತಿಕ ಪರಂಪರೆಯನ್ನು ಉಳಿಸಿ ಬೆಳೆಸಬೇಕಾಗಿದೆ ಎಂದು ತಿಳಿಸಿದರು.

ವಿಜಯದಶಮಿ ಹಬ್ಬವು ಶಕ್ತಿ ಆರಾಧನೆ, ಸತ್ಯದ ವಿಜಯ ಹಾಗೂ ದುಷ್ಟಶಕ್ತಿಗಳ ಸಂಹಾರದ ಸಂಕೇತವಾಗಿದೆ. ಮಕ್ಕಳಲ್ಲಿ ಬಾಲ್ಯದಿಂದಲೇ ದೇಶಪ್ರೇಮ, ಶಿಸ್ತು, ಸೇವಾ ಮನೋಭಾವ ಹಾಗೂ ರಾಷ್ಟ್ರಭಕ್ತಿಯ ಗುಣಗಳನ್ನು ಬೆಳೆಸುವ ಆಶಯದೊಂದಿಗೆ ಡಾ. ಕೇಶವ ಬಲಿರಾಮ ಹೆಡ್ಗೇವಾರ್ ಅವರು ರಾಷ್ಟ್ರೀಯ ಸ್ವಯಂಸೇವಕ ಸಂಘವನ್ನು ಸ್ಥಾಪಿಸಿದರು. ವ್ಯಕ್ತಿತ್ವ ನಿರ್ಮಾಣದ ಮೂಲಕ ಸಮಾಜ ಮತ್ತು ರಾಷ್ಟ್ರದ ಅಭಿವೃದ್ಧಿಗೆ ಕೊಡುಗೆ ನೀಡುವುದು ಸಂಘದ ಪ್ರಮುಖ ಉದ್ದೇಶವಾಗಿದೆ ಎಂದು ವಿವರಿಸಿದರು.

ದೇಶದ ಭವಿಷ್ಯ ರೂಪಿಸುವಲ್ಲಿ ಯುವಜನರ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಯುವಕರು ಶಿಸ್ತು, ಸಂಸ್ಕಾರ, ಸಾಮಾಜಿಕ ಜವಾಬ್ದಾರಿ ಹಾಗೂ ಸೇವಾ ಮನೋಭಾವವನ್ನು ಜೀವನದಲ್ಲಿ ಅಳವಡಿಸಿಕೊಂಡು ಸಮಾಜದ ಒಳಿತಿಗಾಗಿ ಶ್ರಮಿಸಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಅಭಿನವ ಕಪಿಲ ಸಿದ್ದರಾಮೇಶ್ವರ ಶಿವಾಚಾರ್ಯರು ಸೇರಿದಂತೆ ವಿವಿಧ ಮಠಗಳ ಶಿವಾಚಾರ್ಯರು ಸಾನ್ನಿಧ್ಯ ವಹಿಸಿದ್ದರು. ರಾಷ್ಟ್ರೀಯ ಸ್ವಯಂಸೇವಕ ಸಂಘದ ಪದಾಧಿಕಾರಿಗಳು, ಸ್ವಯಂಸೇವಕರು, ಗಣ್ಯರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

ಮಕ್ಕಳ ಭವಿಷ್ಯ ರೂಪಿಸುವಲ್ಲಿ ಪೋಷಕರ ಪಾತ್ರ ಮಹತ್ವದ್ದು: ಆಂಜನೇಯ ನಸಲಾಪುರ



ಮಾನ್ವಿ: ಮಕ್ಕಳ ಉತ್ತಮ ಭವಿಷ್ಯ ನಿರ್ಮಾಣದಲ್ಲಿ ಪೋಷಕರ ಪಾತ್ರ ಅತ್ಯಂತ ಮಹತ್ವದ್ದಾಗಿದ್ದು, ಶಿಕ್ಷಣದ ಜೊತೆಗೆ ಉತ್ತಮ ಸಂಸ್ಕಾರ, ಶಿಸ್ತು, ಪ್ರಾಮಾಣಿಕತೆ ಹಾಗೂ ಆತ್ಮವಿಶ್ವಾಸವನ್ನು ಬೆಳೆಸುವ ಜವಾಬ್ದಾರಿ ತಂದೆ-ತಾಯಿಯರ ಮೇಲಿದೆ ಎಂದು ಸಂಪನ್ಮೂಲ ವ್ಯಕ್ತಿ ಆಂಜನೇಯ ನಸಲಾಪುರ ಹೇಳಿದರು.

ಪಟ್ಟಣದ ಲೋಯೋಲಾ ಪ್ರೌಢಶಾಲೆಯಲ್ಲಿ ಆಯೋಜಿಸಿದ್ದ ಪಾಲಕರ ಸಭೆಯಲ್ಲಿ ಮಕ್ಕಳ ಭವಿಷ್ಯ ರೂಪಿಸುವಲ್ಲಿ ಪೋಷಕರ ಪಾತ್ರ ಕುರಿತು ವಿಶೇಷ ಉಪನ್ಯಾಸ ನೀಡಿ ಅವರು ಮಾತನಾಡಿದರು.

ಮನೆಯೇ ಮಕ್ಕಳ ಮೊದಲ ಪಾಠಶಾಲೆಯಾಗಿದ್ದು, ತಾಯಿ ಮೊದಲ ಗುರು ಹಾಗೂ ತಂದೆ ಎರಡನೇ ಗುರು ಎಂಬುದನ್ನು ಪೋಷಕರು ಸದಾ ನೆನಪಿನಲ್ಲಿಟ್ಟುಕೊಳ್ಳಬೇಕು. ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಕೇವಲ ಅಂಕಗಳಿಗೆ ಆದ್ಯತೆ ನೀಡದೆ ಮಕ್ಕಳಲ್ಲಿ ನೈತಿಕ ಮೌಲ್ಯಗಳು, ಉತ್ತಮ ನಡವಳಿಕೆ ಹಾಗೂ ಜೀವನ ಕೌಶಲ್ಯಗಳನ್ನು ಬೆಳೆಸಬೇಕು ಎಂದು ತಿಳಿಸಿದರು.

ಮೊಬೈಲ್ ಮತ್ತು ಸಾಮಾಜಿಕ ಜಾಲತಾಣಗಳ ಅತಿಯಾದ ಬಳಕೆ, ಓದಿನ ಒತ್ತಡ ಹಾಗೂ ಮಾನಸಿಕ ಆತಂಕದಿಂದ ಮಕ್ಕಳನ್ನು ದೂರವಿಡಲು ಪೋಷಕರು ಪ್ರತಿದಿನ ಅವರೊಂದಿಗೆ ಸಮಯ ಕಳೆಯಬೇಕು. ಮಕ್ಕಳ ಸಮಸ್ಯೆಗಳನ್ನು ಆಲಿಸಿ, ಇತರ ಮಕ್ಕಳೊಂದಿಗೆ ಹೋಲಿಕೆ ಮಾಡದೆ ಅವರ ಆಸಕ್ತಿ ಮತ್ತು ಸಾಮರ್ಥ್ಯಕ್ಕೆ ಅನುಗುಣವಾಗಿ ಪ್ರೋತ್ಸಾಹಿಸಬೇಕು ಎಂದು ಸಲಹೆ ನೀಡಿದರು.

ವಿಶೇಷವಾಗಿ ಹತ್ತನೇ ತರಗತಿ ವಿದ್ಯಾರ್ಥಿಗಳಿಗೆ ಪರೀಕ್ಷಾ ಸಮಯದಲ್ಲಿ ಮನೆಯಲ್ಲಿ ಶಾಂತ ವಾತಾವರಣ ಕಲ್ಪಿಸಬೇಕು. ಅಂಕಗಳಿಗಿಂತ ಮಕ್ಕಳ ಪರಿಶ್ರಮಕ್ಕೆ ಹೆಚ್ಚಿನ ಮಹತ್ವ ನೀಡಬೇಕು. ಸಮಯದ ಸದ್ಬಳಕೆ, ದುಡಿಮೆಯ ಮೌಲ್ಯ, ಉತ್ತಮ ಸ್ನೇಹಿತರ ಆಯ್ಕೆ ಹಾಗೂ ದುಶ್ಚಟಗಳಿಂದ ದೂರವಿರುವ ಕುರಿತು ಮಕ್ಕಳಿಗೆ ಸೂಕ್ತ ಮಾರ್ಗದರ್ಶನ ನೀಡಬೇಕು ಎಂದು ಹೇಳಿದರು.

ಇದಕ್ಕೂ ಮೊದಲು ಪಾಲಕರ ಸಭೆಯನ್ನು ಉದ್ಘಾಟಿಸಿದ ಫಾದರ್ ಸೈರಿಲ್ ರಾಜ್ ಎಸ್. ಜೆ. ಮಾತನಾಡಿ, ಮಕ್ಕಳ ಶೈಕ್ಷಣಿಕ ಪ್ರಗತಿ ಹಾಗೂ ವ್ಯಕ್ತಿತ್ವ ವಿಕಸನದಲ್ಲಿ ಪೋಷಕರ ಜವಾಬ್ದಾರಿ ಪ್ರಮುಖವಾಗಿದ್ದು, ಶಿಕ್ಷಕರು ಮತ್ತು ಪಾಲಕರ ನಡುವಿನ ಸಹಕಾರದಿಂದ ಮಕ್ಕಳಿಗೆ ಉತ್ತಮ ಭವಿಷ್ಯ ರೂಪಿಸಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಶಾಲೆಯ ಮುಖ್ಯಗುರು ಸಿಸ್ಟರ್ ಜೂಲಿಟ್ ಮೊಂಟೆರೋ ಯುಎಫ್ ಎಸ್, ಸಹಾಯಕ ಮುಖ್ಯಗುರು ಡೇವಿಡ್, ಶಿಕ್ಷಕ-ಶಿಕ್ಷಕಿಯರು ಹಾಗೂ ವಿದ್ಯಾರ್ಥಿಗಳ ಪಾಲಕರು ಉಪಸ್ಥಿತರಿದ್ದರು.

ಅರಕೇರಾ ಬಸ್ ನಿಲ್ದಾಣದಲ್ಲಿ ಶೌಚಾಲಯ ಬಂದ್: ಪ್ರಯಾಣಿಕರ ಪರದಾಟಕ್ಕೆ ಆಕ್ರೋಶ



ಅರಕೇರಾ: ತಾಲೂಕು ಕೇಂದ್ರದ ಬಸ್ ನಿಲ್ದಾಣದಲ್ಲಿರುವ ಸಾರ್ವಜನಿಕ ಶೌಚಾಲಯ ದೀರ್ಘಕಾಲದಿಂದ ಮುಚ್ಚಿರುವುದರಿಂದ ಪ್ರಯಾಣಿಕರು ತೀವ್ರ ತೊಂದರೆ ಅನುಭವಿಸುತ್ತಿದ್ದು, ಕೂಡಲೇ ಅಗತ್ಯ ಮೂಲಸೌಕರ್ಯ ಕಲ್ಪಿಸಿ ಶೌಚಾಲಯವನ್ನು ಸಾರ್ವಜನಿಕ ಬಳಕೆಗೆ ಮುಕ್ತಗೊಳಿಸಬೇಕು ಎಂದು ಅಖಂಡ ಕರ್ನಾಟಕ ರಕ್ಷಣಾ ಸೇವಾ ದಳದ ರಾಯಚೂರು ಜಿಲ್ಲಾಧ್ಯಕ್ಷ ಎ.ಎಂ. ನಡುಮನಿ ಆಗ್ರಹಿಸಿದ್ದಾರೆ.

ಈ ಕುರಿತು ಸಂಬಂಧಪಟ್ಟ ಅಧಿಕಾರಿಗಳಿಗೆ ದೂರು ಸಲ್ಲಿಸಿರುವ ಅವರು, ಅರಕೇರಾ ಬಸ್ ನಿಲ್ದಾಣವು ಸುತ್ತಮುತ್ತಲಿನ ಗ್ರಾಮಗಳು ಹಾಗೂ ವಿವಿಧ ತಾಲೂಕುಗಳಿಗೆ ಸಂಪರ್ಕ ಕಲ್ಪಿಸುವ ಪ್ರಮುಖ ಕೇಂದ್ರವಾಗಿದೆ. ಪ್ರತಿದಿನ ನೂರಾರು ಪ್ರಯಾಣಿಕರು ಬಂದು ಹೋಗುವ ನಿಲ್ದಾಣದಲ್ಲಿ ಶೌಚಾಲಯದ ವ್ಯವಸ್ಥೆ ಇಲ್ಲದಿರುವುದು ಸಾರ್ವಜನಿಕರಿಗೆ ಸಮಸ್ಯೆಯಾಗಿದೆ ಎಂದು ತಿಳಿಸಿದ್ದಾರೆ.

ಜನವರಿ 2025ರಲ್ಲಿ ರಾಯಚೂರು ಜಿಲ್ಲೆಯ ತಾಲೂಕು ಹಾಗೂ ಹೋಬಳಿ ಕೇಂದ್ರಗಳ ಒಟ್ಟು 14 ಬಸ್ ನಿಲ್ದಾಣಗಳ ಶೌಚಾಲಯಗಳ ನಿರ್ವಹಣೆಗೆ ಟೆಂಡರ್ ಕರೆಯಲಾಗಿತ್ತು. ಕೊಪ್ಪಳ ಜಿಲ್ಲೆಯ ರಾಜೇಶ್ ಎಂಬುವವರು ಗುತ್ತಿಗೆ ಪಡೆದಿದ್ದರೂ ಅರಕೇರಾ ಬಸ್ ನಿಲ್ದಾಣದ ಶೌಚಾಲಯವನ್ನು ಸಾರ್ವಜನಿಕ ಬಳಕೆಗೆ ಮುಕ್ತಗೊಳಿಸಿಲ್ಲ ಎಂದು ಆರೋಪಿಸಿದ್ದಾರೆ.

ಶೌಚಾಲಯದಲ್ಲಿ ನೀರು, ವಿದ್ಯುತ್ ಹಾಗೂ ಸ್ವಚ್ಛತೆಯ ವ್ಯವಸ್ಥೆಯಿಲ್ಲ. ಸುತ್ತಮುತ್ತ ಗಿಡಗಂಟಿಗಳು ಬೆಳೆದಿದ್ದು, ನಿರ್ವಹಣೆಗೆ ಸಿಬ್ಬಂದಿಯೂ ಇಲ್ಲ. ಇದರಿಂದ ಮಹಿಳೆಯರು, ವೃದ್ಧರು ಸೇರಿದಂತೆ ಪ್ರಯಾಣಿಕರು ತೀವ್ರ ಸಂಕಷ್ಟ ಎದುರಿಸುವಂತಾಗಿದೆ ಎಂದು ದೂರಿನಲ್ಲಿ ವಿವರಿಸಿದ್ದಾರೆ.

ಈ ಅವ್ಯವಸ್ಥೆಗೆ ಕೆಕೆಆರ್‌ಟಿಸಿ ರಾಯಚೂರು ವಿಭಾಗೀಯ ನಿಯಂತ್ರಣಾಧಿಕಾರಿಯನ್ನು ಹೊಣೆಗಾರರನ್ನಾಗಿ ಮಾಡಿ, ಕಾರಣ ಕೇಳಿ ನೋಟಿಸ್ ಜಾರಿಗೊಳಿಸಬೇಕು. ಗುತ್ತಿಗೆದಾರರ ನಿರ್ಲಕ್ಷ್ಯದ ಬಗ್ಗೆಯೂ ತನಿಖೆ ನಡೆಸಿ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದ್ದಾರೆ.

ಶೌಚಾಲಯಕ್ಕೆ ನೀರು, ವಿದ್ಯುತ್, ಸ್ವಚ್ಛತೆ ಸೇರಿದಂತೆ ಅಗತ್ಯ ಸೌಲಭ್ಯಗಳನ್ನು ಒದಗಿಸಿ ದಿನದ 24 ಗಂಟೆಯೂ ಪ್ರಯಾಣಿಕರ ಬಳಕೆಗೆ ಲಭ್ಯವಾಗುವಂತೆ ತುರ್ತು ಕ್ರಮ ಕೈಗೊಳ್ಳಬೇಕು ಎಂದು ಎ.ಎಂ. ನಡುಮನಿ ಮನವಿ ಮಾಡಿದ್ದಾರೆ.

ಕೃಷಿ ಜಮೀನಿನಲ್ಲಿ ವೈನ್‌ಶಾಪ್ ತೆರೆಯಲು ರೈತ ಸಂಘದ ವಿರೋಧ



ದೇವದುರ್ಗ: ತಾಲೂಕಿನ ಸಾಸ್ಸಿಗೇರಾ ಸೀಮಾದ ಕೃಷಿ ಜಮೀನಿನಲ್ಲಿ ಮದ್ಯದಂಗಡಿ ತೆರೆಯಲು ಮುಂದಾಗಿರುವುದನ್ನು ವಿರೋಧಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ (ಚುನ್ನಪ್ಪ ಪೂಜೇರಿ ಬಣ) ತಾಲೂಕು ಘಟಕದ ಪದಾಧಿಕಾರಿಗಳು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಅಬಕಾರಿ ಇಲಾಖೆಯ ಅಧಿಕಾರಿಗಳಿಗೆ ತಕರಾರು ಅರ್ಜಿ ಸಲ್ಲಿಸಿ, ಅನುಮತಿ ನೀಡದಂತೆ ಒತ್ತಾಯಿಸಿದ್ದಾರೆ.

ದೇವದುರ್ಗ ಹೋಬಳಿಯ ಸಾಸ್ಸಿಗೇರಾ ಸೀಮಾದ ಸರ್ವೆ ನಂ.69ರಲ್ಲಿರುವ 30 ಗುಂಟೆ ಕೃಷಿ ಜಮೀನು ಶರಣಗೌಡ ತಂದೆ ಭೀಮರಾಯ ಹಂಚಿನಾಳ ಅವರಿಗೆ ಸೇರಿದ್ದು, ಮಲ್ಲಪ್ಪ ವಿಶ್ವಕರ್ಮ ಅವರು ಜಮೀನನ್ನು ಗುತ್ತಿಗೆ ಆಧಾರದಲ್ಲಿ ಪಡೆದು ವೈನ್‌ಶಾಪ್ ತೆರೆಯಲು ಮುಂದಾಗಿದ್ದಾರೆ ಎಂದು ರೈತ ಸಂಘ ಆರೋಪಿಸಿದೆ.

ಕೃಷಿ ಚಟುವಟಿಕೆಗಳಿಗೆ ಬಳಸಬೇಕಾದ ಜಮೀನನ್ನು ವಾಣಿಜ್ಯ ಉದ್ದೇಶಕ್ಕೆ ಬಳಸುವುದು ಸೂಕ್ತವಲ್ಲ. ಮದ್ಯದಂಗಡಿ ತೆರೆಯುವ ಕುರಿತು ಅಕ್ಕಪಕ್ಕದ ಜಮೀನುಗಳ ರೈತರಿಗೆ ಯಾವುದೇ ಮಾಹಿತಿ ನೀಡಿಲ್ಲ. ಮದ್ಯದಂಗಡಿ ಆರಂಭವಾದರೆ ಕೃಷಿ ಚಟುವಟಿಕೆಗಳಿಗೆ ಅಡ್ಡಿಯಾಗುವುದರ ಜೊತೆಗೆ ರೈತರು ಹಾಗೂ ಕೃಷಿ ಕಾರ್ಮಿಕರಿಗೆ ತೊಂದರೆಯಾಗಲಿದೆ ಎಂದು ಆತಂಕ ವ್ಯಕ್ತಪಡಿಸಿದ್ದಾರೆ.

ಮದ್ಯದಂಗಡಿ ಆರಂಭವಾದರೆ ಮದ್ಯವ್ಯಸನಿಗಳು ಕೃಷಿ ಜಮೀನುಗಳಲ್ಲಿ ಮದ್ಯ ಸೇವಿಸಿ ಖಾಲಿ ಬಾಟಲಿಗಳನ್ನು ಎಸೆಯುವ ಸಾಧ್ಯತೆಯಿದೆ. ಇದರಿಂದ ಹೊಲಗಳಲ್ಲಿ ಕೆಲಸ ಮಾಡುವ ಮಹಿಳೆಯರು ಹಾಗೂ ಕೂಲಿ ಕಾರ್ಮಿಕರ ಸುರಕ್ಷತೆಗೂ ಸಮಸ್ಯೆಯಾಗಬಹುದು. ಈಗಾಗಲೇ ಮದ್ಯವ್ಯಸನದಿಂದ ಅನೇಕ ಕುಟುಂಬಗಳು ಸಂಕಷ್ಟಕ್ಕೆ ಸಿಲುಕಿದ್ದು, ಮತ್ತೊಂದು ಮದ್ಯದಂಗಡಿಗೆ ಅವಕಾಶ ನೀಡಬಾರದು ಎಂದು ಆಗ್ರಹಿಸಿದ್ದಾರೆ.

ರೈತರ ಹಿತಾಸಕ್ತಿ, ಮಹಿಳೆಯರ ಸುರಕ್ಷತೆ ಹಾಗೂ ಸಾರ್ವಜನಿಕರ ನೆಮ್ಮದಿಯನ್ನು ಗಮನದಲ್ಲಿಟ್ಟುಕೊಂಡು ಕೃಷಿ ಜಮೀನಿನಲ್ಲಿ ವೈನ್‌ಶಾಪ್ ತೆರೆಯಲು ಅನುಮತಿ ನಿರಾಕರಿಸಬೇಕು ಎಂದು ಒತ್ತಾಯಿಸಿದ್ದಾರೆ.

ಈ ಸಂದರ್ಭದಲ್ಲಿ ರೈತ ಸಂಘದ ತಾಲೂಕು ಅಧ್ಯಕ್ಷ ಹನುಮಂತ್ರಾಯ ದೊರೆ ಸಿಪ್ಪತ್ತಗೇರಾ, ಗೌರವಾಧ್ಯಕ್ಷ ಮಹೇಂದ್ರ ಮೇತ್ರೆ ಗೌರಂಪೇಟೆ, ಉಪಾಧ್ಯಕ್ಷ ತಿಮ್ಮನಗೌಡ ಗೌರಂಪೇಟೆ, ಕಾರ್ಯದರ್ಶಿ ಮಾರುತಿ ನಾಯಕ, ಕೋಶಾಧ್ಯಕ್ಷ ಸುರೇಶಗೌಡ, ಸಂಘಟನಾ ಕಾರ್ಯದರ್ಶಿಗಳಾದ ಇಬ್ರಾಹಿಂ ಸಾಬ್, ನಾಗರಾಜ ತಳವಾರದೊಡ್ಡಿ, ಸಾಮಾಜಿಕ ಜಾಲತಾಣ ಅಧ್ಯಕ್ಷ ಶರಣು ನಾಯಕ ಸೇರಿದಂತೆ ಇತರರು ಉಪಸ್ಥಿತರಿದ್ದರು.

ರಾಯರ ದರ್ಶನದ ಬಳಿಕ ರಾಯಚೂರಿನ ಓಂ ಸಾಯಿ ಧ್ಯಾನ ಮಂದಿರಕ್ಕೆ ರಾಶಿ ಚಿತ್ರತಂಡ ಭೇಟಿ



ರಾಯಚೂರು, ನ.4: ಕನ್ನಡ ಚಿತ್ರರಂಗದ ಹಿರಿಯ ನಟ ಶಶಿಕುಮಾರ್ ಅವರ ಪುತ್ರ, ಯುವ ನಟ ಆದಿತ್ಯ ಶಶಿಕುಮಾರ್ ಅವರು ತಮ್ಮ ಮುಂಬರುವ ರಾಶಿ ಚಿತ್ರದ ನಿರ್ಮಾಪಕ ಅಖಿಲೇಶ್ ಹಾಗೂ ಚಿತ್ರತಂಡದ ಸದಸ್ಯರೊಂದಿಗೆ ಬುಧವಾರ ನಗರದ ಓಂ ಸಾಯಿ ಧ್ಯಾನ ಮಂದಿರಕ್ಕೆ ಭೇಟಿ ನೀಡಿ ಶಿರಡಿ ಸಾಯಿಬಾಬಾ ಅವರ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿದರು.

ನವೆಂಬರ್ 13ರಂದು ರಾಜ್ಯಾದ್ಯಂತ ಬಿಡುಗಡೆಯಾಗಲಿರುವ ರಾಶಿ ಚಿತ್ರದ ಯಶಸ್ಸಿಗಾಗಿ ಚಿತ್ರತಂಡವು ಮೊದಲು ಮಂತ್ರಾಲಯದ ಶ್ರೀ ರಾಘವೇಂದ್ರ ಸ್ವಾಮಿಗಳ ದರ್ಶನ ಪಡೆದು, ನಂತರ ರಾಯಚೂರಿನ ಓಂ ಸಾಯಿ ಧ್ಯಾನ ಮಂದಿರಕ್ಕೆ ಆಗಮಿಸಿತು.

ಈ ಸಂದರ್ಭದಲ್ಲಿ ಮಾತನಾಡಿದ ನಟ ಆದಿತ್ಯ ಶಶಿಕುಮಾರ್, ತಮ್ಮ ಕುಟುಂಬಕ್ಕೆ ಶಿರಡಿ ಸಾಯಿಬಾಬಾ ಅವರ ಮೇಲೆ ಅಪಾರ ಭಕ್ತಿ ಮತ್ತು ನಂಬಿಕೆಯಿದೆ. ತಮ್ಮ ಮನೆಯ ಹೆಸರನ್ನು ತಂದೆ ಶಶಿಕುಮಾರ್ ಅವರು ದ್ವಾರಕಾಮಾಯಿ ಎಂದು ಇಟ್ಟಿದ್ದು, ಮನೆಯಲ್ಲಿ ಸಾಯಿಬಾಬಾ ಅವರ ಬೃಹತ್ ಭಾವಚಿತ್ರವಿದೆ. ರಾಯಚೂರಿನ ಓಂ ಸಾಯಿ ಧ್ಯಾನ ಮಂದಿರಕ್ಕೆ ಭೇಟಿ ನೀಡಿದಾಗ ಶಿರಡಿಯ ದ್ವಾರಕಾಮಾಯಿಯಲ್ಲಿರುವಂತಹ ಮನಃಶಾಂತಿ ದೊರೆತಿದೆ ಎಂದು ಸಂತಸ ವ್ಯಕ್ತಪಡಿಸಿದರು.

ಶ್ರೀ ರಾಘವೇಂದ್ರ ಸ್ವಾಮಿಗಳು ಹಾಗೂ ಶಿರಡಿ ಸಾಯಿಬಾಬಾ ಅವರ ಆಶೀರ್ವಾದದಿಂದ ರಾಶಿ ಚಿತ್ರ ಯಶಸ್ಸು ಕಾಣಲಿ ಎಂದು ಪ್ರಾರ್ಥಿಸಿರುವುದಾಗಿ ತಿಳಿಸಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಸಹ ಕಾರ್ಯದರ್ಶಿ ದಂಡಪ್ಪ ಬಿರಾದರ್ ಅವರು ಚಿತ್ರತಂಡವನ್ನು ಸ್ವಾಗತಿಸಿ, ಪುಸ್ತಕ ನೀಡಿ ಗೌರವಿಸಿದರು. ಮಂತ್ರಾಲಯಕ್ಕೆ ಆಗಮಿಸುವ ಚಲನಚಿತ್ರ ನಟರು ಹಾಗೂ ಗಣ್ಯರು ರಾಯಚೂರಿನ ಓಂ ಸಾಯಿ ಧ್ಯಾನ ಮಂದಿರಕ್ಕೂ ಭೇಟಿ ನೀಡುತ್ತಿರುವುದು ಸಂತಸದ ಸಂಗತಿ ಎಂದು ಹೇಳಿದರು.

ಮಂದಿರದ ಸಂಸ್ಥಾಪಕ ಸಾಯಿಕಿರಣ್ ಆದೋನಿ ಗುರುಜಿ ಮಾತನಾಡಿ, ಹಿರಿಯ ನಟ ಶಶಿಕುಮಾರ್ ಅವರಂತೆ ಆದಿತ್ಯ ಶಶಿಕುಮಾರ್ ಕೂಡ ಕನ್ನಡ ಚಿತ್ರರಂಗದಲ್ಲಿ ಉತ್ತಮ ಹೆಸರು ಗಳಿಸಲಿ. ನಿರ್ಮಾಪಕ ಅಖಿಲೇಶ್ ಸೇರಿದಂತೆ ಇಡೀ ಚಿತ್ರತಂಡಕ್ಕೆ ಯಶಸ್ಸು ದೊರೆಯಲಿ ಎಂದು ಶುಭ ಹಾರೈಸಿದರು.

ಇದೇ ವೇಳೆ ಆದಿತ್ಯ ಶಶಿಕುಮಾರ್ ಅವರ ಹೆಸರಿನಲ್ಲಿ ವಿಶೇಷ ಅರ್ಚನೆ, ಪೂಜೆ ಹಾಗೂ ಮಂಗಳಾರತಿ ನೆರವೇರಿಸಲಾಯಿತು. ಚಿತ್ರತಂಡಕ್ಕೆ ಶನಿದೇವರ ಹಾಗೂ ದ್ವಾರಕಾಮಾಯಿಯ ದರ್ಶನ ಮಾಡಿಸಲಾಯಿತು.

ಪುನೀತ್ ರಾಜ್‌ಕುಮಾರ್ ಚಾರಿಟೇಬಲ್ ಟ್ರಸ್ಟ್ ಅಧ್ಯಕ್ಷ ಸಾದಿಕ್ ಖಾನ್ ಅವರು ಚಿತ್ರದ ಪ್ರಚಾರಕ್ಕೆ ಸಹಕಾರ ನೀಡುವುದಾಗಿ ತಿಳಿಸಿದರು.

ಕಾರ್ಯಕ್ರಮದಲ್ಲಿ ಸುದರ್ಶನ್ ರೆಡ್ಡಿ, ರಾಜೇಶ್ ಮಡಿವಾಳ್, ಉಸ್ಮಾನ್, ಉಮಾಕಾಂತ್, ಮುನಿಸ್ವಾಮಿ, ಪರಮೇಶ್, ನವೀನ್, ಶ್ರೀಶೈಲ, ಬಸವನಗೌಡ ಸೇರಿದಂತೆ ಸಾಯಿಭಕ್ತರು ಹಾಗೂ ಗಣ್ಯರು ಉಪಸ್ಥಿತರಿದ್ದರು.

ರಾಷ್ಟ್ರಮಟ್ಟದ ಕ್ರಿಕೆಟ್ ಪಂದ್ಯಾವಳಿಗೆ ಹಟ್ಟಿಯ ವಿದ್ಯಾರ್ಥಿನಿ ಪವಿತ್ರಾ ಆಯ್ಕೆ



ಹಟ್ಟಿ ಚಿನ್ನದ ಗಣಿ: ಪಟ್ಟಣದ ಶ್ರೀ ಶರಣಬಸವೇಶ್ವರ ಬಾಲಕಿಯರ ಪ್ರೌಢಶಾಲೆಯ ವಿದ್ಯಾರ್ಥಿನಿ ಕುಮಾರಿ ಪವಿತ್ರಾ ಪರಸಪ್ಪ ಅವರು 202627ನೇ ಸಾಲಿನ 17 ವರ್ಷದೊಳಗಿನ ಬಾಲಕಿಯರ ರಾಜ್ಯಮಟ್ಟದ ಕ್ರಿಕೆಟ್ ಪಂದ್ಯಾವಳಿಯಲ್ಲಿ ದ್ವಿತೀಯ ಸ್ಥಾನ ಪಡೆದು ರಾಷ್ಟ್ರಮಟ್ಟದ ಕ್ರಿಕೆಟ್ ಪಂದ್ಯಾವಳಿಗೆ ಆಯ್ಕೆಯಾಗಿದ್ದಾರೆ.

ವಿದ್ಯಾರ್ಥಿನಿಯ ಸಾಧನೆಯನ್ನು ಗುರುತಿಸಿ ಲಿಂಗಸುಗೂರು ತಾಲೂಕು ಕ್ಷೇತ್ರ ಶಿಕ್ಷಣಾಧಿಕಾರಿ ಸುಜಾತ ಹೂನೂರ ಅವರು ಶ್ರೀ ಶರಣಬಸವೇಶ್ವರ ಬಾಲಕಿಯರ ಪ್ರೌಢಶಾಲೆಗೆ ಭೇಟಿ ನೀಡಿ ಪವಿತ್ರಾ ಅವರನ್ನು ಸನ್ಮಾನಿಸಿ ಅಭಿನಂದಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಗ್ರಾಮೀಣ ಭಾಗದ ವಿದ್ಯಾರ್ಥಿನಿಯರು ಕ್ರೀಡಾ ಕ್ಷೇತ್ರದಲ್ಲಿ ಉತ್ತಮ ಸಾಧನೆ ಮಾಡುತ್ತಿರುವುದು ಹೆಮ್ಮೆಯ ಸಂಗತಿಯಾಗಿದೆ. ಪವಿತ್ರಾ ರಾಷ್ಟ್ರಮಟ್ಟದಲ್ಲಿಯೂ ಉತ್ತಮ ಪ್ರದರ್ಶನ ನೀಡಿ, ಮುಂದಿನ ದಿನಗಳಲ್ಲಿ ಅಂತಾರಾಷ್ಟ್ರೀಯ ಮಟ್ಟದವರೆಗೆ ಸಾಧನೆ ಮುಂದುವರಿಸಲಿ ಎಂದು ಶುಭ ಹಾರೈಸಿದರು.

ಶ್ರೀ ಶರಣಬಸವೇಶ್ವರ ಶಿಕ್ಷಣ ಸಂಸ್ಥೆಯ ಆಡಳಿತಾಧಿಕಾರಿ ಪ್ರಶಾಂತ್ ಪಾಟೀಲ್ ಮಾತನಾಡಿ, ರಾಜ್ಯಮಟ್ಟದ ಕ್ರಿಕೆಟ್ ಪಂದ್ಯಾವಳಿಯಲ್ಲಿ ಉತ್ತಮ ಪ್ರದರ್ಶನ ನೀಡಿ ರಾಷ್ಟ್ರಮಟ್ಟಕ್ಕೆ ಆಯ್ಕೆಯಾಗಿರುವ ಪವಿತ್ರಾ ಶಾಲೆ ಹಾಗೂ ಶಿಕ್ಷಣ ಸಂಸ್ಥೆಗೆ ಕೀರ್ತಿ ತಂದಿದ್ದಾರೆ. ಅವರ ಸಾಧನೆಯ ಹಿಂದೆ ಪಾಲಕರ ಪ್ರೋತ್ಸಾಹ ಹಾಗೂ ದೈಹಿಕ ಶಿಕ್ಷಣ ಶಿಕ್ಷಕ ರಾಯಪ್ಪ ಬಳಗಾನೂರು ಅವರ ಮಾರ್ಗದರ್ಶನ ಪ್ರಮುಖ ಪಾತ್ರ ವಹಿಸಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ವಿದ್ಯಾರ್ಥಿನಿಯ ಸಾಧನೆಗೆ ಸಂಸ್ಥೆಯ ವತಿಯಿಂದ ಅಭಿನಂದನೆ ಸಲ್ಲಿಸಿ, ರಾಷ್ಟ್ರಮಟ್ಟದ ಸ್ಪರ್ಧೆಯಲ್ಲಿ ಮತ್ತಷ್ಟು ಯಶಸ್ಸು ಸಾಧಿಸುವಂತೆ ಹಾರೈಸಿದರು.

ಈ ಸಂದರ್ಭದಲ್ಲಿ ಲಿಂಗಸುಗೂರು ತಾಲೂಕು ದೈಹಿಕ ಶಿಕ್ಷಣ ಸಂಯೋಜಕ ಚಂದ್ರಶೇಖರ, ಶಾಲೆಯ ಶಿಕ್ಷಕ-ಶಿಕ್ಷಕಿಯರು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

ಡಿಸೆಂಬರ್ ಅಂತ್ಯದೊಳಗೆ ಅರ್ಹರಿಗೆ ಇ-ಸ್ವತ್ತು ದಾಖಲೆ ವಿತರಿಸಿ: ಹಾಲಸಿದ್ದಪ್ಪ ಸೂಚನೆ



ಸಿಂಧನೂರು: ಭೂ ಗ್ಯಾರಂಟಿ ಯೋಜನೆಯಡಿ ಅಗತ್ಯ ದಾಖಲೆಗಳನ್ನು ಹೊಂದಿರುವ ಅರ್ಹ ಆಸ್ತಿ ಮಾಲೀಕರಿಗೆ ಡಿಸೆಂಬರ್ ಅಂತ್ಯದೊಳಗೆ ಇ-ಸ್ವತ್ತು ದಾಖಲೆಗಳನ್ನು ವಿತರಿಸಲು ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿ ಹಾಲಸಿದ್ದಪ್ಪ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಸೂಚಿಸಿದರು.

ನಗರದ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ಬುಧವಾರ ವಿವಿಧ ಇಲಾಖೆಗಳ ತಾಲೂಕು ಮಟ್ಟದ ಅಧಿಕಾರಿಗಳು ಹಾಗೂ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳೊಂದಿಗೆ ನಡೆಸಿದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅವರು ಮಾತನಾಡಿದರು.

ಪಂಚಾಯತ್ ರಾಜ್ ಇಲಾಖೆಯ ನಿರ್ದೇಶನದಂತೆ ಭೂ ಗ್ಯಾರಂಟಿ ಯೋಜನೆಯಡಿ ಇ-ಸ್ವತ್ತು ವಿತರಣೆ ಕಾರ್ಯವನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸಬೇಕು. ಅರ್ಹ ಆಸ್ತಿ ಮಾಲೀಕರಿಗೆ ನೋಟಿಸ್ ನೀಡಿ, ಆಕ್ಷೇಪಣೆ ಸಲ್ಲಿಸಲು ಏಳು ದಿನಗಳ ಕಾಲಾವಕಾಶ ಕಲ್ಪಿಸಬೇಕು. ನಂತರ ವಿದ್ಯುತ್ ಬಿಲ್ ಸೇರಿದಂತೆ ಲಭ್ಯವಿರುವ ದಾಖಲೆಗಳನ್ನು ಪರಿಶೀಲಿಸಿ, ಸ್ವತ್ತಿನ ನೈಜ ಮಾಲೀಕರಿಗೆ ಇ-ಸ್ವತ್ತು ದಾಖಲೆ ವಿತರಿಸಬೇಕು ಎಂದು ತಿಳಿಸಿದರು.

ಸಭೆಯಲ್ಲಿ ಹಾಜರಿದ್ದ ಪಿಡಿಒಗಳಿಂದ ಆಯಾ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಒಟ್ಟು ಆಸ್ತಿಗಳ ಸಂಖ್ಯೆ, ಈಗಾಗಲೇ ಇ-ಸ್ವತ್ತು ವಿತರಿಸಿರುವ ಆಸ್ತಿಗಳು ಹಾಗೂ ಬಾಕಿ ಉಳಿದಿರುವ ಆಸ್ತಿಗಳ ಕುರಿತು ಮಾಹಿತಿ ಪಡೆದರು. ಬಾಕಿ ಇರುವ ಅರ್ಜಿಗಳನ್ನು ತ್ವರಿತವಾಗಿ ವಿಲೇವಾರಿ ಮಾಡುವಂತೆ ಸೂಚಿಸಿದರು.

ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿ ಅಧ್ಯಕ್ಷತೆಯಲ್ಲಿ ನಡೆದ ಸಭೆಗೆ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಗೈರುಹಾಜರಾಗಿದ್ದರು. ಅಲ್ಲದೆ, ವಿವಿಧ ಗ್ರಾಮ ಪಂಚಾಯಿತಿಗಳ ಸುಮಾರು ಅರ್ಧದಷ್ಟು ಪಿಡಿಒಗಳು ಸಭೆಯಲ್ಲಿ ಭಾಗವಹಿಸಿರಲಿಲ್ಲ.

ಸಭೆಯಲ್ಲಿ ತಾಲೂಕು ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ತಾಲೂಕು ಪಂಚಾಯಿತಿ ಸಹಾಯಕ ನಿರ್ದೇಶಕ ಯಂಕಪ್ಪ ಉಪಸ್ಥಿತರಿದ್ದರು.

ಡಾ. ಅಂಬೇಡ್ಕರ್ ಜೀವನ ವಿದ್ಯಾರ್ಥಿಗಳಿಗೆ ಮಾದರಿ: ಅಬ್ರಾಹಂ ಹೊನ್ನಟಗಿ



ಸಿರವಾರ, ನ.4: ಭಾರತರತ್ನ ಡಾ. ಬಿ.ಆರ್. ಅಂಬೇಡ್ಕರ್ ಅವರ ಜೀವನ, ಹೋರಾಟ ಹಾಗೂ ಸಾಧನೆಗಳು ವಿದ್ಯಾರ್ಥಿಗಳಿಗೆ ಆದರ್ಶವಾಗಿದ್ದು, ಅವರ ವಿಚಾರಧಾರೆಗಳನ್ನು ಅಧ್ಯಯನ ಮಾಡಿ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಎಂಆರ್‌ಎಚ್‌ಎಸ್ ಜಿಲ್ಲಾಧ್ಯಕ್ಷ ಅಬ್ರಾಹಂ ಹೊನ್ನಟಗಿ ಹೇಳಿದರು.

ಪಟ್ಟಣದ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಆಯೋಜಿಸಿದ್ದ ಭಾರತರತ್ನ ಡಾ. ಬಿ.ಆರ್. ಅಂಬೇಡ್ಕರ್ ಓದು ಕಾರ್ಯಕ್ರಮದಲ್ಲಿ ಅವರ ಸಮಗ್ರ ಬದುಕು ಮತ್ತು ಹೋರಾಟದ ಕುರಿತು ವಿಶೇಷ ಉಪನ್ಯಾಸ ನೀಡಿ ಮಾತನಾಡಿದರು.

ಡಾ. ಅಂಬೇಡ್ಕರ್ ಅವರು 64 ವಿಷಯಗಳಲ್ಲಿ ಅಧ್ಯಯನ ನಡೆಸಿ ಮಹಾನ್ ವಿದ್ವಾಂಸರಾಗಿ ಹೊರಹೊಮ್ಮಿದ್ದರು. ನಿರಂತರ ಪರಿಶ್ರಮ, ಓದು ಹಾಗೂ ಜ್ಞಾನಾರ್ಜನೆಯ ಮೂಲಕ ಸಮಾಜದಲ್ಲಿ ಮಹತ್ತರ ಬದಲಾವಣೆ ತಂದರು. ಅನೇಕ ಅವಮಾನ ಮತ್ತು ಸವಾಲುಗಳನ್ನು ಎದುರಿಸಿದರೂ ಎದೆಗುಂದದೆ ವಿವಿಧ ದೇಶಗಳ ಸಂವಿಧಾನಗಳನ್ನು ಅಧ್ಯಯನ ಮಾಡಿ ಭಾರತದ ಸಂವಿಧಾನ ರಚನೆಯಲ್ಲಿ ಪ್ರಮುಖ ಪಾತ್ರ ವಹಿಸಿದರು ಎಂದು ತಿಳಿಸಿದರು.


ಸಮಾನತೆ, ಸಾಮಾಜಿಕ ನ್ಯಾಯ, ಮಹಿಳಾ ಹಕ್ಕುಗಳು, ಕಾರ್ಮಿಕರ ಕಲ್ಯಾಣ ಹಾಗೂ ಆರ್ಥಿಕ ಸುಧಾರಣೆಗಳಿಗೆ ಅಂಬೇಡ್ಕರ್ ನೀಡಿದ ಕೊಡುಗೆ ಅಪಾರವಾಗಿದೆ. ಮೀಸಲಾತಿ ವ್ಯವಸ್ಥೆ ಕೇವಲ ಒಂದು ಸಮುದಾಯಕ್ಕೆ ಸೀಮಿತವಾಗಿಲ್ಲ ಎಂಬುದನ್ನು ವಿದ್ಯಾರ್ಥಿಗಳು ಅರಿತುಕೊಳ್ಳಬೇಕು ಎಂದು ಹೇಳಿದರು.

ಕಾಲೇಜಿನ ಪ್ರಾಚಾರ್ಯ ಹನುಮಂತ ಚನ್ನೂರು ಮಾತನಾಡಿ, ವಿದ್ಯಾರ್ಥಿಗಳು ಜಾತಿ, ಮತ, ಪಂಥಗಳ ಭೇದವಿಲ್ಲದೆ ಸಮಾನತೆಯ ಮನೋಭಾವ ಬೆಳೆಸಿಕೊಳ್ಳಬೇಕು. ಸರ್ಕಾರದ ಶೈಕ್ಷಣಿಕ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಂಡು ಉತ್ತಮ ಶಿಕ್ಷಣ ಪಡೆದು ಸಮಾಜಕ್ಕೆ ಕೊಡುಗೆ ನೀಡಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮವನ್ನು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಚನ್ನಪ್ಪ ಚನ್ನೂರು ಉದ್ಘಾಟಿಸಿದರು. ಇದೇ ಸಂದರ್ಭದಲ್ಲಿ ರಸಪ್ರಶ್ನೆ, ಪ್ರಬಂಧ ಹಾಗೂ ಆಶುಭಾಷಣ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಪ್ರಮಾಣಪತ್ರ ಮತ್ತು ಪುಸ್ತಕಗಳನ್ನು ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಪಟ್ಟಣ ಪಂಚಾಯಿತಿ ಸದಸ್ಯ ಅಜಿತ್ ಕುಮಾರ್ ಹೊನ್ನಟಗಿ, ಸೂರಿ ದುರುಗಣ್ಣ ನಾಯಕ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ತಾಲೂಕು ಅಧ್ಯಕ್ಷ ಹನುಮೇಶ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಇಸ್ಮಾಯಿಲ್, ಚನ್ನಬಸವ, ಉಪನ್ಯಾಸಕ ಜಯಪ್ಪ ಸೇರಿದಂತೆ ಇತರರು ಉಪಸ್ಥಿತರಿದ್ದರು. ಯಾಸೀನ್ ಕಾರ್ಯಕ್ರಮ ನಿರೂಪಿಸಿದರು.

ಭೂ ದಾಖಲೆಗಳಲ್ಲಿ ವಿಸ್ತೀರ್ಣ ವ್ಯತ್ಯಾಸ: ತಿದ್ದುಪಡಿಗೆ ನಿರ್ಲಕ್ಷ್ಯ ಆರೋಪ



ರಾಯಚೂರು: ನಗರದ ಸೀಮಾಂತರದ ಸರ್ವೆ ನಂ. 911/7ರ ಜಮೀನಿನ ವಿಸ್ತೀರ್ಣವನ್ನು ಭೂ ದಾಖಲೆಗಳಲ್ಲಿ ತಪ್ಪಾಗಿ ನಮೂದಿಸಲಾಗಿದ್ದು, ಹಲವು ಬಾರಿ ಮನವಿ ಸಲ್ಲಿಸಿದರೂ ತಿದ್ದುಪಡಿ ಮಾಡದೆ ನಿರ್ಲಕ್ಷ್ಯ ವಹಿಸಲಾಗಿದೆ ಎಂದು ಆರೋಪಿಸಿ ಭೂ ದಾಖಲೆಗಳ ಉಪನಿರ್ದೇಶಕರ ಕಚೇರಿ ವಿರುದ್ಧ ರೂಪಾ ಶ್ರೀನಿವಾಸ ನಾಯಕ ದೂರು ಸಲ್ಲಿಸಿದ್ದಾರೆ.

ರಾಯಚೂರು ಸೀಮಾಂತರದ ಸರ್ವೆ ನಂ. 911/6ರಲ್ಲಿ ಮೂಲತಃ 4 ಗುಂಟೆ ಜಮೀನಿದ್ದು, ರಿಪೋಡಿ ಪ್ರಕ್ರಿಯೆ ಬಳಿಕ ಸರ್ವೆ ನಂ. 911/7ರಲ್ಲಿ 6 ಗುಂಟೆ ಎಂದು ಪಹಣಿಯಲ್ಲಿ ನಮೂದಿಸಲಾಗಿದೆ. ಹೆಚ್ಚುವರಿಯಾಗಿ 2 ಗುಂಟೆ ಜಮೀನು ಸೇರ್ಪಡೆಯಾಗಿರುವ ಕುರಿತು ಸಮರ್ಪಕ ಪರಿಶೀಲನೆ ನಡೆಸಬೇಕು ಎಂದು ಒತ್ತಾಯಿಸಿದ್ದಾರೆ.

ಮೂಲ ಮಾಲೀಕರಿಂದ 1997ರಲ್ಲಿ ಜಿ. ಮಲ್ಲಯ್ಯ ಅವರು ಜಮೀನು ಖರೀದಿಸಿದ್ದು, ಬಳಿಕ 2004ರಲ್ಲಿ ನವೋದಯ ಎಜುಕೇಶನ್ ಟ್ರಸ್ಟ್‌ನ ಎಸ್. ರಾಜೇಂದ್ರರೆಡ್ಡಿ ಅವರಿಗೆ 6 ಗುಂಟೆ ಎಂದು ಮಾರಾಟ ಮಾಡಲಾಗಿದೆ ಎಂಬ ಆರೋಪವನ್ನು ದೂರಿನಲ್ಲಿ ಉಲ್ಲೇಖಿಸಲಾಗಿದೆ.

ಈ ಜಮೀನಿನ ಮೂಲ ಮಾಲೀಕರು ಪರಿಶಿಷ್ಟ ಜಾತಿಗೆ ಸೇರಿದ ಬಡ ಕುಟುಂಬಗಳವರಾಗಿದ್ದು, ದಾಖಲೆಗಳಲ್ಲಿನ ವ್ಯತ್ಯಾಸದಿಂದ ಅವರಿಗೆ ಅನ್ಯಾಯವಾಗಿದೆ ಎಂದು ದೂರಿನಲ್ಲಿ ತಿಳಿಸಿದ್ದಾರೆ.

ಈ ಸಂಬಂಧ ಫೆಬ್ರವರಿ 26, ಜೂನ್ 29 ಹಾಗೂ ಜುಲೈ 19ರಂದು ವಿವಿಧ ಅರ್ಜಿದಾರರು ದೂರು ಸಲ್ಲಿಸಿದ್ದರೂ ಅಧಿಕಾರಿಗಳಿಂದ ಸಮರ್ಪಕ ಉತ್ತರ ದೊರೆತಿಲ್ಲ ಎಂದು ಆರೋಪಿಸಿದ್ದಾರೆ.

ಸರ್ವೆ ನಂ. 911/7ರ ಪಹಣಿಯಲ್ಲಿ ನಮೂದಿಸಿರುವ 6 ಗುಂಟೆ ವಿಸ್ತೀರ್ಣವನ್ನು ಪರಿಶೀಲಿಸಿ 4 ಗುಂಟೆಗೆ ತಿದ್ದುಪಡಿ ಮಾಡಬೇಕು. ಫಾರಂ ನಂ. 10, ನಕ್ಷೆ ಸೇರಿದಂತೆ ಸಂಬಂಧಿತ ದಾಖಲೆಗಳಲ್ಲಿನ ಲೋಪಗಳನ್ನು ಸರಿಪಡಿಸಿ ಮೂಲ ಮಾಲೀಕರಿಗೆ ನ್ಯಾಯ ಒದಗಿಸಬೇಕು. ನಿರ್ಲಕ್ಷ್ಯ ವಹಿಸಿದ ಅಧಿಕಾರಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು. ಇಲ್ಲವಾದಲ್ಲಿ ನ್ಯಾಯಾಲಯದಲ್ಲಿ ಕ್ರಿಮಿನಲ್ ಮೊಕದ್ದಮೆ ದಾಖಲಿಸುವುದಾಗಿ ಎಚ್ಚರಿಸಿದ್ದಾರೆ.

ಈ ಸಂದರ್ಭದಲ್ಲಿ ಪಿ. ಯಲ್ಲಪ್ಪ, ಎನ್. ಕೆ. ನಾಗರಾಜ್, ಕೆ. ಮಹದೇವಪ್ಪ, ಆರ್. ಹನುಮಂತು, ಕೆ.ಪಿ. ಅನಿಲ್ ಕುಮಾರ್, ಎಸ್. ರಾಜು, ಎಸ್. ವೆಂಕಟೇಶ್, ಪಿ. ನರಸಪ್ಪ, ಆರ್. ಆಂಜಿನೇಯ್ಯ, ನೀಲಕಂಠ, ಬಿ. ಗೋವಿಂದ್, ಆಶಣ್ಣ, ಭೋಜರಾಜ್, ಮಾರೆಪ್ಪ, ಸಚಿನ್ ಖಾನಾಪುರ ಸೇರಿದಂತೆ ಇತರರು ಉಪಸ್ಥಿತರಿದ್ದರು.

Printed By and Published By Tunga Bimba Printers & Publishers 4-4-401/94, Gulbraga Builders Layout, Opp Navodaya Hospital, Yeragera Road, Raichur-584103. Editor: Gururaja.K